ಸಂಪುಟ : 9 ಸಂಚಿಕೆ 184 ಪುಟ : 4 ಬೆಲೆ: 3.00 ಬುಧವಾರ ಆಗಸ್ಟ್ 28 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 184 Pages : 4 Price : 3.00 Wednesday August 28 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಶಾಂತಿ : ಸುವ್ಯವಸ್ಥಿತ ಹಬ್ಬಗಳ ಆಚರಣೆಗೆ ಜಿಲ್ಲಾಧಿಕಾರಿ ಕರೆ

# ಅನುಮತಿಗಾಗಿ ಏಕಗವಾಕ್ಷಿ ವ್ಯವಸ್ಥೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆ ಕೋಮು ಸೌಹಾರ್ದತೆ ಹಾಗೂ ಶಾಂತಿ-ಸುವ್ಯವಸ್ಥೆಗೆ ಹೆಸರುವಾಸಿಯಾಗಿದೆ. ಪ್ರತಿ ವರ್ಷದಂತೆ ಈ ವರ್ಷವೂ ಸಹ ಶ್ರೀ ಗೌರಿಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬವನ್ನು ಸೌಹಾರ್ದತೆಯಿಂದ ಆಚರಿಸೋಣ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು.

ನಗರದ ಪೊಲೀಸ್ ಭವನದಲ್ಲಿ ಮಂಗಳವಾರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಶ್ರೀಗೌರಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬದ ಪ್ರಯುಕ್ತ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣೇಶನನ್ನು ಕೂರಿಸುವ ಸಂಘ-ಸಂಸ್ಥೆಗಳು ಹಾಗೂ ಮಂಡಳಿಗಳು ಕಾನೂನು ಸುವ್ಯವಸ್ಥೆ ಪಾಲಿಸಿ, ಇಲಾಖೆಗಳ ಅನುಮತಿಯನ್ನು ಪಡೆದುಕೊಳ್ಳಲು ಒಂದೇ ಸ್ಥಳದಲ್ಲಿ ಅರ್ಜಿ ಸಲ್ಲಿಸುವ ಮೂಲಕ ಸರಳೀಕರಣಗೊಳಿಸಲು ಏಕ ಗವಾಕ್ಷಿ ವ್ಯವಸ್ಥೆ ಮಾಡಲಾಗುವುದು. ಗದಗ ನಗರದ ಟೌನ್ ಪೊಲೀಸ್ ಠಾಣೆಯಲ್ಲಿ ಸೆಪ್ಟೆಂಬರ್ 1ರಿಂದ ಗಣೇಶ ಆಚರಣೆ ಕುರಿತಂತೆ ಅನುಮತಿಗಾಗಿ ಅರ್ಜಿ ಸಲ್ಲಿಸಬಹುದು ಎಂದರು. ಪ್ರತಿ ಬಡಾವಣೆಗಳಲ್ಲಿ ಗಣೇಶ ವಿಸರ್ಜನೆಯು




ಒಂದೊಂದು ದಿನ ಮಾಡುವುದರಿಂದ ಕಾನೂನು ಭದ್ರತೆ ಒದಗಿಸುವುದು ಕಷ್ಟ ಸಾಧ್ಯ. ಆದ್ದರಿಂದ ಈ ವರ್ಷ ಗಣೇಶ ವಿಸರ್ಜನೆಯನ್ನು 9ನೇ ದಿನದಂದು ಎಲ್ಲರೂ ಸೇರಿ ಶಾಂತಿಯುತವಾಗಿ, ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದಂತೆ ಪೂರ್ಣಗೊಳಿಸುವಂತೆ ತಿಳಿಸಿದರು.

> ಸೌಹಾರ್ದಯುತ ಹಬ್ಬದ ಆಚರಣೆಗೆ ತಮ್ಮೆಲ್ಲರ ಸಹಕಾರ ಅತ್ಯಗತ್ಯ. ಸರ್ಕಾರದ ನಿಯಮ ಹಾಗೂ ಮಾರ್ಗಸೂಚಿಗಳನ್ವಯ ಗಣೇಶ ಚತುರ್ಥಿ ಆಚರಣೆಗೆ ಮುಂದಾಗೋಣ. ನಿಗದಿಪಡಿಸಿದ ಧ್ವನಿವರ್ಧಕ ಬಳಕೆ ಮಾಡಿ ಶಬ್ದ ಮಾಲಿನ್ಯ ತಪ್ಪಿಸೋಣ. ಗಣೇಶೋತ್ಸವ ಸಮಿತಿಗಳು ಸ್ವಯಂ ಕಾರ್ಯಕರ್ತರನ್ನು ನೇಮಕ ಮಾಡುವ ಮೂಲಕ ಶಾಂತಿಯುತ ಆಚರಣೆಗೆ ಗದಗ ಜಿಲ್ಲೆ ಮತ್ತೊಮ್ಮೆ ಉದಾಹರಣೆಯಾಗಲಿ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.

ಗಣೇಶ ವಿಸರ್ಜನೆಯನ್ನು 9ನೇ ದಿನ ಬೆಳ್ಳಿಗೆ 9 ಗಂಟೆಯಿಂದ ರಾತ್ರಿ 10 ಗಂಟೆಯೊಳಗಾಗಿ ಪೂರ್ಣಗೊಳಿಸಬೇಕು. ದೊಡ್ಡ ಗಾತ್ರದ ಗಣೇಶ ವಿಸರ್ಜನೆಗೆ ಅಗತ್ಯವಿರುವ ಕ್ರೇನ್ ವ್ಯವಸ್ಥೆಯನ್ನು ಒದಗಿಸಲಾಗುವುದು. ವಿಸರ್ಜನೆ ದಿನ ಕೆರೆ, ಹಳ್ಳ, ನದಿ ಹತ್ತಿರ ಸಾರ್ವಜನಿಕರು ಎಚ್ಚರಿಕೆಯಿಂದ ವಿಸರ್ಜನೆಗೆ ಮುಂದಾಗಬೇಕು.ಗಣೇಶ ವಿಸರ್ಜನೆಯ ಮೆರವಣಿಗೆ ಮಾರ್ಗಗಳನ್ನು ಮೊದಲೇ ನಿಗದಿಪಡಿಸಿ ಮಾಹಿತಿಯನ್ನು ಹತ್ತಿರದ ಪೊಲೀಸ್ ಠಾಣೆಗೆ ಒದಗಿಸಬೇಕು. ಯಾವುದೇ ಕಾರಣಕ್ಕೂ ನಿಗದಿಪಡಿಸಿದ ಮೆರವಣಿಗೆ ಮಾರ್ಗವನ್ನು ಬದಲಾಯಿಸಕೂಡದು ಎಂದರು. ರಾಸಾಯನಿಕ ಬಣ್ಣಗಳಿಂದ ಕೂಡಿದ ಹಾಗೂ ಪಿಒಪಿಯಿಂದ ತಯಾರಿಸಿದ ಗಣಪತಿಗಳ ಬದಲಾಗಿ ಪರಿಸರ ಸ್ನೇಹಿ ಗಣೇಶ ಪ್ರತಿಷ್ಠಾನಗೆ ಗಣೇಶೋತ್ಸವ ಸಮಿತಿಗಳು ಮುಂದಾಗಬೇಕು. ಈ ಮೂಲಕ ನಮ್ಮ ಸುತ್ತಲಿನ ಪರಿಸರದ ಸಂರಕ್ಷಣೆಗೆ ಆದ್ಯತೆ ನೀಡಿದಂತಾಗುತ್ತದೆ ಎಂದರು. ಗಣೇಶ ಹಬ್ಬದ ಪ್ರಯುಕ್ತ ಹಾಗೂ ವಿಸರ್ಜನೆ ದಿನಗಳಂದು ಮದ್ಯ ಮಾರಾಟ ನಿಷೇಧಿಸುವ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ವಿಸರ್ಜನೆಯ ಸಂದರ್ಭದಲ್ಲಿ ನಾಗರಿಕ ಸಮಿತಿಯ ಸದಸ್ಯರನ್ನು ತಮ್ಮ ವಿಶ್ವಾಸಕ್ಕೆ ತೆಗೆದುಕೊಂಡು ವಿಸರ್ಜನೆಯ ಅಂತ್ಯದವರೆಗೂ ಅವರುಗಳು ಹಾಜರಿರಬೇಕು. ಉತ್ಸವವನ್ನು ಶಾಂತ ರೀತಿಯಿಂದ ನಡೆಸಲು ಇಲಾಖಾ ಅಧಿಕಾರಿಗಳಿಗೆ ಸೂಚಿಸಿದ ಅವರು, ಇದಕ್ಕೆ ಸೂಕ್ತ ಸಹಕಾರವನ್ನು ಸಂಘಟಕರು ನೀಡಬೇಕೆಂದು ಹೇಳಿದರು. ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಗಣೇಶ ಸಮಿತಿಯ ಮಹಾಮಂಡಳದ ಅಧ್ಯಕ್ಷ ರಾಜು ಮಾತನಾಡಿದರು. ಸಭೆಯಲ್ಲಿ ಜಿ.ಪಂ ಸಿಇಒ ಭರತ್ ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.



## ಪುಣ್ಯಾರಾಧನೆ ಕಾರ್ಯಕ್ರಮ ನಾಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಕರೇವಡಿಮಠದ ಪಟ್ಟಾಧ್ಯಕ್ಷರಾದ ಲಿಂ.ಶ್ರೀ ಶಂಕರ ಶಿವಾಚಾರ್ಯ ಮಹಾಸ್ವಾಮಿಗಳ ಪುಣ್ಯಾರಾಧನೆ ಸ್ಮರಣೋತ್ಸವ ಆ.29ರಂದು ಪಟ್ಟಣದ ಹಳ್ಳದಕೇರಿಯಲ್ಲಿರುವ ಕರೇವಾಡಿಮಠದಲ್ಲಿ ನಡೆಯಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದು, ಕರೇವಾಡಿಮಠದ ಈಗಿನ ಪಟ್ಟಾಧ್ಯಕ್ಷರಾದ ಶ್ರೀ ಮಳೆಮಲ್ಲಿಕಾರ್ಜುನ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಲಿದ್ದಾರೆ. ಗುರುವಾರ ಮುಂಜಾನೆ 8 ಗಂಟೆಗೆ ಗಂಗಾದೇವತಾ ಪೂಜೆ, ಜ.ಪಂಚಾಚಾರ್ಯ ಧ್ವಜಾರೋಹಣ, ಲಿಂ.ಶಂಕರ ಶಿವಾಚಾರ್ಯ ಮಹಾಸ್ವಾಮಿಗಳ ಗದ್ದುಗೆಗೆ ರುದ್ರಾಭಿಷೇಕ, ಶಿವಅಷ್ಟೋತ್ತರ ನಾಮಾವಳಿ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಶಿವಗಣಾರಾಧನೆ ನಿಮಿತ್ತ ಮದ್ಯಾಹ್ನ 1 ಗಂಟೆಗೆ ಅನ್ನದಾಸೋಹ, ಮಹಾಪ್ರಸಾದ ಸೇವೆ ಜರುಗುವದು.

ಅಂದು ಸಂಜೆ 6 ಗಂಟೆಗೆ ಧರ್ಮ ಸಭೆ ನಡೆಯಲಿದ್ದು, ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಮೈಸೂರ್ ಹಾಗೂ ಬೆಳ್ಳಟ್ಟಿ ಜಪದಕಟ್ಟಿ ಮಠ ಬನ್ನಿಕೊಪ್ಪಬ್ರಹನ್ಮಠದ ಶ್ರೀ ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಕರೆವಡಿಮಠದ ನಿಯೋಜಿತ ಉತ್ತರಾಧಿಕಾರಿಗಳಾದ ಮಂಜುನಾಥ ದೇವರು ಕರೆವಡಿಮಠ ವಹಿಸಲಿದ್ದು, ಸಂಜೆ 7 ಗಂಟೆಗೆ ಜಾನಪದ ಕಲಾವಿದ ಹರ್ಲಾಪೂರದ ಶಂಬಯ್ಯ ಹಿರೇಮಠ ಹಾಗೂ ತಂಡದವರಿಂದ ಜಾಗೃತಿಗಾಗಿ ಜಾನಪದ ಕಾರ್ಯಕ್ರಮ ಜರುಗಲಿದೆ. ಪಟ್ಟಣದ ಶಾರದಾ ಸ್ವರಾಂಜಲಿ ಸಂಗೀತ ಪಾಠಶಾಲೆ ಇವರಿಂದ ಸಂಗೀತ ಸುಧೆ ಹಾಗೂ ಶಕ್ತಿ ಭಜನಾ ಸಂಘ, ಮಾರುತಿ ಭಜನಾ ಸಂಘ ಹಳ್ಳದಕೆರಿ ಓಣಿ ಇವರಿಂದ ಭಜನಾ ಸೇವೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಅಹಿಂದ ಒಕ್ಕೂಟದಿಂದ ನಡೆದ ಪ್ರತಿಭಟನೆಯಲ್ಲಿ ಶಾಸಕ ಜಿ.ಎಸ್. ಪಾಟೀಲ

# ಆದೇಶ ಹಿಂಪಡೆಯದಿದ್ದರೆ ರಾಷ್ಟ್ರಪತಿಗಳಿಗೆ ದೂರು

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜನಾದೇಶದ ಮೇರೆಗೆ ಬಹುಮತದೊಂದಿಗೆ ಆಡಳಿತ ನಡೆಸುತ್ತಿರುವ ಸಿಎಂ ಸಿದ್ದರಾಮಯ್ಯರ ವಿರುದ್ಧ ನೀಡಿರುವ ಪ್ರಾಸಿಕ್ಯೂಷನ್ ಹಿಂಪಡೆಯದಿದ್ದರೆ ರಾಷ್ಟ್ರಪತಿಗೆ ದೂರು ನೀಡಲು ನಿರ್ಧಾರ ಮಾಡಿದ್ದೇವೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ರಾಜ್ಯದ ಜನರು ಬಹುಮತ ನೀಡಿರುವ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಕೇಂದ್ರ ಸರ್ಕಾರ ರಾಜ್ಯಪಾಲರ ಮೂಲಕ ಸಂಚನ್ನು ನಡೆಸುತ್ತಿದೆ ಎಂದು ಆರೋಪಿಸಿ ಪಟ್ಟಣದಲ್ಲಿ ಮಂಗಳವಾರ ತಾಲೂಕಾ ಅಹಿಂದ ಒಕ್ಕೂಟದಿಂದ ನಡೆದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.

ಕೆಲವು ಪ್ರಕರಣಗಳಲ್ಲಿ ಚಾರ್ಜ್‌ಶೀಟ್ ಸಿದ್ಧವಿದ್ದರೂ ಬಿಜೆಪಿ, ಜೆಡಿಎಸ್ ನಾಯಕರ ಪ್ರಕರಣಗಳಿಗೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡದ ರಾಜ್ಯಪಾಲರು ಸಿಎಂ ಸಿದ್ದರಾಮಯ್ಯ ವಿರುದ್ಧ ಕಾರ್ಯಕರ್ತರೊಬ್ಬರು ನೀಡಿದ ದೂರಿಗೆ ಮರುದಿನವೇ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದು ಆಶ್ಚರ್ಯಕರವಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರಪತಿಗಳನ್ನು ಭೇಟಿ ಮಾಡಲು ನಿರ್ಧರಿಸಿದ್ದೇವೆ. ಹೀಗಾಗಿ ಪ್ರಕರಣವನ್ನು ದೀರ್ಘಕ್ಕೆ





ಒಯ್ಯುವ ಮುನ್ನ ರಾಜ್ಯಪಾಲರು ತಮ್ಮ ಆದೇಶ ಹಿಂಪಡೆಯಬೇಕು ಎಂದ ಆಗ್ರಹಿಸಿದ ಅವರು, ಸಿದ್ದರಾಮಯ್ಯ ರಾಜ್ಯದ ಸರ್ವ ಸಮುದಾಯಗಳ ಅಭಿವೃದ್ಧಿಯೊಂದಿಗೆ ಜನಪರ ಆಡಳಿತ ನಡೆಸುತ್ತಿದ್ದಾರೆ. ಆದರೆ ಕೇವಲ ಬಂಡವಾಳಶಾಹಿಗಳ ಪರವಾಗಿ ಆಡಳಿತ ನಡೆಸುತ್ತಿರುವ ಮೋದಿ ಅವರು ಲೋಕಸಭಾ ಚುನಾವಣೆಯಲ್ಲಿ ಚಾರ್‌ಸೌ ಪಾರ್ ಎಂದಿದ್ದರು. ಆದರೆ ದೇಶದ ಜನತೆ ಅವರಿಗೆ ಬಹುಮತ ನೀಡದೇ ಪಾಠ ಕಲಿಸಿದ್ದಾರೆ ಎಂದರು.

ಬಿಜೆಪಿ ಆಡಳಿತದಲ್ಲಿ ಜನಾರ್ಧನ ರೆಡ್ಡಿ ಸೇರಿ ಇತರರ ಹಗರಣಗಳು ದೊಡ್ಡದಿವೆ. ಸಿಎಂ ಆಗಿದ್ದಾಗ ಯಡಿಯೂರಪ್ಪ ಜೈಲುಪಾಲಾಗಿದ್ದರು. ಆದರೆ 2008ರಿಂದ ಇಲ್ಲಿವರೆಗೆ ಸಿಎಂ ಆಗಿರುವ ಸಿದ್ದರಾಮಯ್ಯ ಅವರಿಗೆ ಆಕಾಶವೇ ದೂರವಿರದ ದಿನಗಳಿದ್ದಾಗ ಸಿಎಂ ಇಂತಹ ಕ್ಷುಲಕ ಕೆಲಸಕ್ಕೆ ಕೈ ಹಾಕಿಲ್ಲ ಎಂಬುದನ್ನು ನಾವು ಅರಿತುಕೊಂಡು ಒಗ್ಗಟ್ಟಾಗಬೇಕಿದೆ ಎಂದರು.

ಮುಖಂಡರಾದ ಎಚ್.ಎಸ್. ಸೋಂಪುರ, ಎಂ.ಎಸ್. ಹಡಪದ ಮಾತನಾಡಿದರು. ಇದಕ್ಕೂ ಮುನ್ನ ಪಟ್ಟಣದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಯಿತು. ಸಿದ್ದಪ್ಪ ಬಂಡಿ, ಮುರ್ತುಜಾ ಡಾಲಾಯತ್, ವಿ.ಆರ್. ಗುಡಿಸಾಗರ, ಎಫ್.ಎಸ್. ಕರಿದುರಗನವರ, ರಫೀಕ್ ತೋರಗಲ್, ಯಲ್ಲಪ್ಪ ಬಂಕದ, ರಾಜು ಸಾಂಗ್ಲೀಕರ, ಉಮೇಶ ರಾಠೋಡ, ಅಂದಪ್ಪ ಬಿಚ್ಚೂರ, ಶರಣು ಪೂಜಾರ, ಶಶಿಧರ ಹೂಗಾರ, ಶ್ರೀಧರ ಬಿದರಳ್ಳಿ ಸೇರಿ ಇತರರು ಇದ್ದರು.

> ಕುಮಾರಸ್ವಾಮಿ ಮನೆತನದಲ್ಲಿ ನಡೆದ ಘಟನೆಗಳನ್ನು ಜನತೆ ಮರೆತಿಲ್ಲ. ಅವೆಲ್ಲವನ್ನು ಬಿಟ್ಟು ಮೈಕ್ ಮುಂದೆ ಬಂದು ನಿಲ್ಲುವ ಭಂಡತನವನ್ನು ಜೆಡಿಎಸ್ ನಾಯಕರು ಹೊಂದಿದ್ದಾರೆ. ರಾಜ್ಯದ ಬಿಜೆಪಿ ನಾಯಕರು ಮಾಡಿದ ತಪ್ಪಿಗೆ ರಾಜ್ಯದ ಜನತೆ ಪಾಠ ಕಲಿಸಿದ್ದಾರೆ. ಆದರೂ ಕೆಲ ಬಿಜೆಪಿ ನಾಯಕರು ಅದೇ ಹಾದಿಯಲ್ಲಿ ಮುಂದುವರೆಯಬೇಕು ಅಂತಿದ್ದೀರಾ, ನಿಮ್ಮ ನಾಯಕರ ಕಾರ್ಯಗಳಿಗೆ ಖುಷಿಪಡುತ್ತಿದ್ದೀರಾ, ನೀವು ಅದೇ ದೋಣಿಯಲ್ಲಿ ಸಾಗುವಿರಾ ಎಂದು ಶಾಸಕ ಜಿ.ಎಸ್. ಪಾಟೀಲ ಪ್ರಶ್ನಿಸಿದರು.

## ಕೆಎಎಸ್ ಪೂರ್ವಭಾವಿ ಪರೀಕ್ಷೆ ಸುಗಮ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ಲೋಕಸೇವಾ ಆಯೋಗ ಮಂಗಳವಾರ ನಡೆಸಿದ ಕೆಎಎಸ್ ಪೂರ್ವಭಾವಿ ಪರೀಕ್ಷೆಯು ಧಾರವಾಡದಲ್ಲಿ ಸೂಸುತ್ರವಾಗಿ ಮತ್ತು ಶಾಂತಿಯುತವಾಗಿ ಜರುಗಿತು. ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ನಗರದ ವಿವಿಧ ಕಾಲೇಜುಗಳಲ್ಲಿ ಸ್ಥಾಪಿಸಿದ್ದ ಕೆ.ಎ.ಎಸ್ ಪ್ರಿಲಿಮ್ಸ್ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರಿಶೀಲಿಸಿದರು.

ಸಿ.ಸಿ ಟಿ.ವಿ, ಫೇಸ್ ರೀಡಿಂಗ್ ಇತ್ಯಾದಿಗಳ ಪಾಲನೆ ಕುರಿತು ನೋಡಲ್ ಅಧಿಕಾರಿ ಮತ್ತು ಪ್ರಾಚಾರ್ಯರಿಂದ ಮಾಹಿತಿ ಪಡೆದರು.

ದಕ್ಷಿಣ ಭಾರತ ಹಿಂದಿ ಪ್ರಚಾರ ಸಭಾದ ರಾಜೀವ ಗಾಂಧಿ ಪ್ರೌಢಶಾಲೆ, ಬಾಷಲ್ ಮಿಷನ್ ಗರ್ಲ್ಸ್ ಹೈಸ್ಕೂಲ್, ಕಿಟಲ್ ಕಲಾ ಹಾಗೂ ವಿಜ್ಞಾನ ಮಹಾವಿದ್ಯಾಲಯ ಸೇರಿದಂತೆ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿದರು.

ಧಾರವಾಡ ನಗರದ ವಿವಿಧ ಕಾಲೇಜುಗಳಲ್ಲಿ ಕೆಎಎಸ್ ಪೂರ್ವಭಾವಿ ಪರೀಕ್ಷೆಗಾಗಿ 33 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿತ್ತು. ಕೆಎಎಸ್ ಪೂರ್ವಭಾವಿ ಪರೀಕ್ಷೆ ಬರೆಯಲು 10,818 ಜನ ಅಭ್ಯರ್ಥಿಗಳು ಧಾರವಾಡ ಕೇಂದ್ರವನ್ನು ಆಯ್ಕೆ ಮಾಡಿಕೊಂಡಿದ್ದರು.

ಬೆಳಿಗ್ಗೆ 10ರಿಂದ 12 ಗಂಟೆವರೆಗೆ ಜರುಗಿದ ಮೊದಲ ಪೇಪರ್ ಪರೀಕ್ಷೆಗೆ 6,879 ಅಭ್ಯರ್ಥಿಗಳು ಹಾಜರಾಗಿದ್ದರು ಮತ್ತು 3,939 ಜನ ಅಭ್ಯರ್ಥಿಗಳು ಗೈರಾಗಿದ್ದರು. ಮದ್ಯಾಹ್ನ 2ರಿಂದ 4 ಗಂಟೆವರೆಗೆ ಎರಡನೇ ಪತ್ರಿಕೆ ಪರೀಕ್ಷೆಗೆ 7,062 ಅಭ್ಯರ್ಥಿಗಳು ಹಾಜರಾಗಿದ್ದರು ಮತ್ತು 3,756 ಜನ ಅಭ್ಯರ್ಥಿಗಳು ಗೈರಾಗಿದ್ದರು ಎಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

### ಬಿಜೆಪಿ ಸದಸ್ಯತ್ವ ಅಭಿಯಾನ ಕಾರ್ಯಾಗಾರದಲ್ಲಿ ಎಸ್.ವಿ. ಸಂಕನೂರ

# ಕಾರ್ಯಕರ್ತರೇ ಪಕ್ಷದ ಜೀವಾಳ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರದಲ್ಲಿ 6 ದಶಕಗಳ ಕಾಲ ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷ ದೇಶವಾಸಿಗಳ ಮೂಲಭೂತ ಆಶೋತ್ತರಗಳನ್ನ ನಿರ್ಲಕ್ಷಿದ್ದಲ್ಲದೆ ಮಿತಿಮೀರಿದ ಭ್ರಷ್ಟಾಚಾರ, ವಂಶಾಡಳಿತದ ಕಾರಣದಿಂದಾಗಿ ಜನ ಮಾನಸದಿಂದ ದೂರವಾಗುತ್ತಿದೆ. ರಾಷ್ಟ್ರಹಿತವನ್ನೇ ತನ್ನ ಧ್ಯೇಯವನ್ನಾಗಿ ಮಾಡಿಕೊಂಡ ಬಿಜೆಪಿಯಿಂದ ಮಾತ್ರ ಭವ್ಯ ಭಾರತದ ನಿರ್ಮಾಣ ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಮಂಗಳವಾರ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಬಿಜೆಪಿ ಸದಸ್ಯತ್ವ ಅಭಿಯಾನ-2024ರ ಕಾರ್ಯಾಗಾರವನ್ನ ಉದ್ಘಾಟಿಸಿ ಅವರು ಮಾತಾಡುತ್ತಿದ್ದರು.





> ರಾಜ್ಯದಲ್ಲಿ 15 ತಿಂಗಳಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪರಿಶಿಷ್ಟ ಜಾತಿ, ಜನಾಂಗ, ಹಿಂದುಳಿದ ವರ್ಗದವರ ಕಲ್ಯಾಣಕ್ಕೆ ಮೀಸಲಿಟ್ಟ ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದಲ್ಲದೆ ವಾಲ್ಮೀಕಿ, ಮುಡಾದಂತಹ ಸಾವಿರಾರು ಕೋಟಿಯ ಹಗರಣದಲ್ಲಿ ಸಿಕ್ಕು ಜನ ವಿಶ್ವಾಸವನ್ನೇ ಕಳೆದುಕೊಂಡಿದೆ. ಮುಂಬರುವ ಸ್ಥಳೀಯ ಸಂಸ್ಥೆಯ ಚುನಾವಣೆಯಲ್ಲಿ ಬಿಜೆಪಿ ರಾಜ್ಯದಲ್ಲಿ ಅತ್ಯಧಿಕ ಸ್ಥಾನಗಳನ್ನ ಪಡೆಯಲಿದೆ ಎಂದು ಎಸ್.ವಿ. ಸಂಕನೂರ ಹೇಳಿದರು.

ಬಿಜೆಪಿ ಜನಸಾಮಾನ್ಯರ ಪಕ್ಷ. ಕಾರ್ಯಕರ್ತರೇ ಇದರ ಜೀವಾಳ. ಸಾಮಾನ್ಯ ಕಾರ್ಯಕರ್ತನೂ ಇದರ ಅಧ್ಯಕ್ಷ ಆಗಬಹುದು, ಮುಖ್ಯಮಂತ್ರಿ, ಪ್ರಧಾನಿಯೂ ಆಗಬಹುದು. ಪಕ್ಷ ಸಂಘಟನೆಯಲ್ಲಿ ಸದಸ್ಯತಾ ಅಭಿಯಾನದ ಪಾತ್ರ ಪ್ರಮುಖವಾಗಿದ್ದು, 45 ದಿನಗಳ ಕಾಲ ದೇಶಾದ್ಯಂತ ನಡೆಯುವ ಈ ಪವಿತ್ರ ಅಭಿಯಾನದಲ್ಲಿ ಕಾರ್ಯಕರ್ತರು ಪ್ರತಿ ಬೂತ್‌ನಲ್ಲಿ 300ಕ್ಕೂ ಅಧಿಕ ಜನರಿಗೆ ಸದಸ್ಯತ್ವ ನೀಡುವ ಮೂಲಕ ನಿಗದಿತ ಗುರಿಯನ್ನು ತಲುಪಿ ಬಿಜೆಪಿ ಪ್ರಪಂಚದ ದೊಡ್ಡ ಪಕ್ಷ ಎಂಬ ಹೆಗ್ಗಳಿಕೆಯನ್ನು ಉಳಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಹಾಗೂ ಅಭಿಯಾನದ ಜಿಲ್ಲಾ ಸಂಚಾಲಕ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ ಪ್ರಾಸ್ತಾವಿಕವಾಗಿ ಮಾತಾನಾಡಿದರು. ಕಾರ್ಯಾಗಾರದ ವಿಷಯ ತಜ್ಞರಾಗಿ ಬಳ್ಳಾರಿ ವಿಭಾಗದ ಸಹ ಪ್ರಭಾರಿಯಾದ ಚಂದ್ರಶೇಖರಗೌಡ ಪಾಟೀಲ, ಧಾರವಾಡ ವಿಭಾಗದ ಪ್ರಮುಖ ಪ್ರಶಾಂತ ಜಾಧವ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಮ್.ಎಸ್. ಕರಿಗೌಡ್ರ, ಕಾಂತಿಲಾಲ ಬನ್ಸಾಲಿ, ಪಕ್ಷದ ಮಾಜಿ ಜಿಲ್ಲಾಧ್ಯಕ್ಷ ಮುತ್ತಣ್ಣ ಲಿಂಗನಗೌಡ್ರ, ಪ್ರಧಾನ ಕಾರ್ಯದರ್ಶಿ ಆರ್.ಕೆ. ಚವ್ಹಾಣ್ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಪಕ್ಷದ ಜಿಲ್ಲೆಯ 9 ಮಂಡಲ, ಜಿಲ್ಲಾ ಮೋರ್ಚಾ, ವಿವಿಧ ಪ್ರಕೋಷ್ಠಗಳ ಪದಾಧಿಕಾರಿಗಳು, ಅಭಿಯಾನ ಸಮಿತಿ ಸದಸ್ಯರು, ನಗರಸಭೆ ಸದಸ್ಯರು, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರು, ಅಪೇಕ್ಷಿತರು ಉಪಸ್ಥಿತರಿದ್ದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಕ್ಕೀರೇಶ್ ರಟ್ಟೀಹಳ್ಳಿ ಕಾರ್ಯಕ್ರಮ ನಿರೂಪಿಸಿದರೆ, ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶ್ವಿನಿ ಅಂಕಲಕೋಟಿ ವಂದಿಸಿದರು.

## ಜೀವಾವಧಿ ಶಿಕ್ಷೆ ಪ್ರಶ್ನಿಸಿ ಸಂಜೀವ್ ಭಟ್ ಮೇಲ್ಮನವಿ : ಗುಜರಾತ್ ಸರ್ಕಾರಕ್ಕೆ ಸುಪ್ರೀಂ ನೋಟಿಸ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜೀವಾವಧಿ ಜೈಲು ಶಿಕ್ಷೆ ಪ್ರಶ್ನಿಸಿ ಮಾಜಿ ಐಪಿಎಸ್ ಅಧಿಕಾರಿ ಸಂಜೀವ್ ಭಟ್ ಸಲ್ಲಿಸಿರುವ ಮೇಲ್ಮನವಿ ಸಂಬಂಧ ಗುಜರಾತ್ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ನೋಟಿಸ್ ನೀಡಿದೆ.

1990ರ ಕಸ್ಟಡಿ ಚಿತ್ರಹಿಂಸೆ ಮತ್ತು ಸಾವಿನ ಪ್ರಕರಣದಲ್ಲಿ ಸಂಜೀವ್ ಭಟ್ ಅವರಿಗೆ ಜಾಮ್‌ನಗರ ನ್ಯಾಯಾಲಯ ಜೀವಾವಧಿ ಜೈಲು ಶಿಕ್ಷೆ ವಿಧಿಸಿದೆ. ಇದನ್ನು ಪ್ರಶ್ನಿಸಿ ಭಟ್ ಗುಜರಾತ್ ಹೈಕೋರ್ಟ್ ಮೆಟ್ಟಿಲೇರಿದ್ದರು. ಹೈಕೋರ್ಟ್ ಅವರ ಅರ್ಜಿಯನ್ನು ವಜಾಗೊಳಿಸಿದೆ. ಹಾಗಾಗಿ, ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದಾರೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಪ್ರಸನ್ನ ಭಾಲಚಂದ್ರ ವರಾಳೆ ಅವರ ಪೀಠವು ನೋಟಿಸ್ ನೀಡುವಾಗ, ಪ್ರಸ್ತುತ ಅರ್ಜಿಯನ್ನು ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಉಳಿದಿರುವ ಇತರ ಅರ್ಜಿಗಳನ್ನು ಟ್ಯಾಗ್ ಮಾಡಿದೆ.

ಭಟ್ ಪರ ವಾದ ಮಂಡಿಸಿದ ಹಿರಿಯ ವಕೀಲರಾದ ಕಪಿಲ್ ಸಿಬಲ್ ಮತ್ತು ದೇವದತ್ ಕಾಮತ್, ಈ ಅರ್ಜಿಯ ವಿಚಾರಣೆಯ ಅಗತ್ಯವಿದೆ ಎಂದು ಒತ್ತಿ ಹೇಳಿದ್ದಾರೆ ಮತ್ತು ಈ ಅರ್ಜಿಯನ್ನು ನ್ಯಾಯಾಲದ ಮುಂದೆ ಬಾಕಿ ಉಳಿದಿರುವ ಇತರ ಅರ್ಜಿಗಳೊಂದಿಗೆ ಟ್ಯಾಗ್ ಮಾಡಬಹುದು ಎಂಬ ನ್ಯಾಯಾಲಯದ ಪ್ರತಿಪಾದನೆಯನ್ನು ಒಪ್ಪಿಕೊಂಡಿದ್ದಾರೆ. ಈ ಹಿನ್ನೆಲೆ, ವಕೀಲರ ಮನವಿ ಪುರಸ್ಕರಿಸಿದ ನ್ಯಾಯಾಲಯ ನಾಲ್ಕು ವಾರಗಳಲ್ಲಿ ಉತ್ತರಿಸುವಂತೆ ಆದೇಶಿಸಿ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.

ಭಟ್ ಪರ ಇನ್ನಿಬ್ಬರು ವಕೀಲರಾದ ರಾಜೇಶ್ ಜಿ.ಇನಾಮದಾರ್ ಮತ್ತು ಶಾಶ್ವತ್ ಆನಂದ್ ಕೂಡ ನ್ಯಾಯಾಲಯಕ್ಕೆ ಹಾಜರಾಗಿದ್ದರು.

ಈ ಪ್ರಕರಣವು ನವೆಂಬರ್ 1990ರಲ್ಲಿ ಸಂಭವಿಸಿದ ಪ್ರಭುದಾಸ್ ಮಾಧವ್‌ಜಿ ವೈಷ್ಣಾನಿಯವರ ಕಸ್ಟಡಿ ಸಾವಿಗೆ ಸಂಬಂಧಿಸಿದೆ. ಪೊಲೀಸ್ ಕಸ್ಟಡಿಯ ಚಿತ್ರಹಿಂಸೆಯಿಂದ ವೈಷ್ಣಾನಿ ಸಾವನ್ನಪ್ಪಿದ್ದಾರೆ ಎಂದು ಆರೋಪಿಸಲಾಗಿತ್ತು. ವೈಷ್ಣಾನಿ ಸಾವಿನ ಸಮಯದಲ್ಲಿ ಸಂಜೀವ್ ಭಟ್ ಅವರು ಜಾಮ್‌ನಗರದ ಸಹಾಯಕ ಪೊಲೀಸ್ ಅಧೀಕ್ಷಕರಾಗಿದ್ದರು. ಭಾರತ್ ಬಂದ್ ವೇಳೆ ಗಲಭೆ ನಡೆಸಿದ ಆರೋಪದ ಮೇಲೆ ವೈಷ್ಣಾನಿ ಸೇರಿದಂತೆ ಸುಮಾರು 133 ಜನರನ್ನು ಇತರ ಅಧಿಕಾರಿಗಳೊಂದಿಗೆ ಸಂಜೀವ್ ಭಟ್ ಕಸ್ಟಡಿಗೆ ತೆಗೆದುಕೊಂಡಿದ್ದರು. ಹಾಗಾಗಿ, ವೈಷ್ಣಾನಿ ಕಸ್ಟಡಿ ಸಾವಿನ ಆರೋಪ ಭಟ್ ಮತ್ತು ಇತರರ ಮೇಲೆ ಬಂದಿದೆ.

## ರಂಗೋಲಿ ಸ್ಪರ್ಧೆಯ ಫಲಿತಾಂಶ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಪದವಿಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿನಿಯರಿಗೆ ರಂಗೋಲಿ ಸ್ಪರ್ಧೆ ಏರ್ಪಡಿಸಲಾಗಿತ್ತು. ಪಿಯುಸಿ ಸಂಯೋಜಕರಾದ ಪ್ರೊ.ಶಾಹೀದಾ ಶಿರಹಟ್ಟಿ, ಪ್ರೊ. ಆರತಿ, ಪ್ರೊ. ಕುಸುಮಾ ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದರು.

ಪ್ರಥಮ ಸ್ಥಾನವನ್ನು ಭೂಮಿಕಾ ಹಾಗೂ ಲತಾ, ದ್ವಿತೀಯ ಸ್ಥಾನವನ್ನು ಅಮೂಲ್ಯಾ ಬಿ. ಹಾಗೂ ಅಮೂಲ್ಯಾ ಕೆ., ತೃತೀಯ ಸ್ಥಾನವನ್ನು ಸೋಫಿಯಾ ಹಾಗೂ ಫಾತೀಮಾ, ನಾಲ್ಕನೇ ಸ್ಥಾನವನ್ನು ಅಮೂಲ್ಯಾ ಪಡೆದುಕೊಂಡರು.

ವಿಜೇತ ವಿದ್ಯಾರ್ಥಿನಿಯರಿಗೆ ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಪಿಯುಸಿ ಸಂಯೋಜಕಿ ಪ್ರೊ. ಶಾಹೀದಾ ಶಿರಹಟ್ಟಿ ಹಾಗೂ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.

## ಸಂಭ್ರಮದ ಶ್ರೀಕೃಷ್ಣ ಜನ್ಮಾಷ್ಟಮಿ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಕೃಷ್ಣ ಗೊಲ್ಲ ಸಮಾಜದ ಆಶ್ರಯದಲ್ಲಿ ಕೃಷ್ಣ ಜನ್ಮಾಷ್ಟಮಿಯನ್ನು ಶ್ರೀ ಕೃಷ್ಣ ದೇಗುಲದ ಎದುರು ಮೊಸರಿನ ಗಡಗಿಯನ್ನು ಒಡೆಯುವ ಮೂಲಕ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ದೇಗುಲದಲ್ಲಿ ಪ್ರತಿಷ್ಠಾಪಿಸಲಾದ ಕೃಷ್ಣನ ಮೂರ್ತಿಗೆ ಬೆಳಿಗ್ಗೆ ವಿಧಿ ವಿಧಾನಗಳೊಂದಿಗೆ ನಾಗರಾಜ ಭಟ್ಟರ ನೇತೃತ್ವದಲ್ಲಿ ಪಂಚಾಮೃತ ಅಭಿಷೇಕ ನೆರವೇರಿಸಲಾಯಿತು.

ನಂತರ ಶ್ರೀ ಕೃಷ್ಣನ ಮೂರ್ತಿ ಹಾಗೂ ಭಾವಚಿತ್ರ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಯಲ್ಲಿ ಜಾಂಜ್ ಮೇಳಗಳೊಂದಿಗೆ ಸಂಭ್ರಮದಿಂದ ನಡೆಯಿತು. ಮೆರವಣಿಗೆಯಲ್ಲಿ ಶ್ರೀಕೃಷ್ಣ ವೇಷ-ಭೂಷಣ ಧರಿಸಿದ ಮಕ್ಕಳು ಗಮನ ಸೆಳೆದರು. ಮುತ್ತೈದೆಯರು ಮೊಸರು ಗಡಗಿಯ ಕುಂಭವನ್ನು ಹೊತ್ತು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಎತ್ತರದಲ್ಲಿ ಕಟ್ಟಲಾದ ಮೊಸರಿನ ಗಡಗಿಯನ್ನು ಕೃಷ್ಣ ತನ್ನ ಕೊಳಲಿನಿಂದ ಒಡೆದ ನಂತರ ಅದರ ಪ್ರಸಾದವನ್ನು ಭಕ್ತರಿಗೆ ಹಂಚಲಾಯಿತು. ನಂತರ ಮಹಾ ಅನ್ನಪ್ರಸಾದ ನಡೆಯಿತು. ಇದಕ್ಕೂ ಪೂರ್ವ ಹಿಂದಿನ ರಾತ್ರಿ ಕೃಷ್ಣನ ತೊಟ್ಟಿಲಿಗೆ ಹಾಕುವ ಕಾರ್ಯಕ್ರಮ ಜರುಗಿತು. ನಂತರ ಕುಂಬಾರ ಮನೆಗೆ ತೆರಳಿ ಐರಾಣಿಯನ್ನು ತರಲಾಯಿತು.

### ನಿವೃತ್ತ ನೌಕರರ, ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಮಾಸಿಕ ಸಭೆ

## ತಾಲೂಕು ಘಟಕಗಳಲ್ಲಿ ಸದಸ್ಯತ್ವ ಪಡೆದುಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ನರೇಗಲ್

ನಿವೃತ್ತ ನೌಕರರು ಯಾರೇ ಇರಲಿ, ಅವರ ಸಮಸ್ಯೆಗಳಿಗೆ ಗದಗ ಜಿಲ್ಲಾ ನಿವೃತ್ತ ನೌಕರರ ಸಂಘವು ಸ್ಪಂದಿಸುತ್ತದೆ. ಅದಕ್ಕಾಗಿ ಯಾರು ನಿವೃತ್ತಿ ಹೊಂದಿತ್ತೀರೋ ಅವರು ತಮ್ಮ ತಮ್ಮ ತಾಲೂಕು ಘಟಕಗಳಲ್ಲಿ ಸದಸ್ಯತ್ವವನ್ನು ಪಡೆದುಕೊಳ್ಳಬೇಕೆಂದು ಗದಗ ಜಿಲ್ಲಾ ನಿವೃತ್ತ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಬಿ.ಎ. ವಸ್ತ್ರದ ಹೇಳಿದರು.

ಪಟ್ಟಣದ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ನಿವೃತ್ತ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಮಾಸಿಕ ಸಭೆಯಲ್ಲಿ ಅವರು ಮಾತನಾಡಿದರು.

ನಿವೃತ್ತ ನೌಕರರ ಅನೇಕ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಗದಗ ಜಿಲ್ಲಾ ಸಂಘದ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಈ ಸಂಘದ ಚಟುವಟಿಕೆಗಳನ್ನು ಇಡೀ ರಾಜ್ಯವೇ ಗಮನಿಸುತ್ತಿದೆ. ಈಗ ಈ ಜಿಲ್ಲಾ ಸಂಘವನ್ನು ರಾಜ್ಯ ಮಟ್ಟದ ಸಂಘವನ್ನಾಗಿ ಪರಿವರ್ತಿಸಲು ಎಲ್ಲ ಸಿದ್ಧತೆಗಳು ನಡೆದಿವೆ. ಅದಕ್ಕಾಗಿ ಕಾನೂನಾತ್ಮಕ ಸಲಹೆಗಳನ್ನು ಪಡೆಯಲಾಗುತ್ತಿದೆ. ಈ ಸಂಘವು ರಚನೆಗೊಳ್ಳಲು ನಿಮ್ಮೆಲ್ಲರ ಸಹಕಾರ ಅವಶ್ಯವಾಗಿದೆ ಎಂದು ಹೇಳಿದರು.



ಜಿಲ್ಲಾ ಪದಾಧಿಕಾರಿ ರಾಜಶೇಖರ ಕರಡಿ ಮಾತನಾಡಿ, ಈಗ ಜಾರಿಯಾಗುತ್ತಿರುವ ಏಳನೇ ವೇತನ ಆಯೋಗವು ನಿವೃತ್ತರ ನೌಕರರಿಗೆ ಹೇಗೆ ಪ್ರಯೋಜನವಾಗುತ್ತದೆ ಎಂಬುದರ ಬಗ್ಗೆ ವಿವರಣೆ ನೀಡಿ, ಈಗ ನಾವು ಚರ್ಚಿಸಿರುವಂತೆ ನಮಗೆ ಸೌಲಭ್ಯಗಳು ಸಿಗುವ ನಿರೀಕ್ಷೆ ಇದೆಯೇ ಹೊರತು, ಇದೇ ಅಂತಿಮವಲ್ಲ. ಇದಕ್ಕೆ ಸರಕಾರದಿಂದ ಇನ್ನೂ ಮಾರ್ಗದರ್ಶನ ಬರಬೇಕಿದೆ. ಇದೇ ತಿಂಗಳಿನಲ್ಲಿ ನಮಗೆ 7ನೇ ವೇತನ ಆಯೋಗದ ಸೌಲಭ್ಯಗಳು ಸಿಗದಿದ್ದರೂ, ಬರುವ ಸೆಪ್ಟಂಬರ್‌ನಲ್ಲಿ ಖಂಡಿತ ನಮಗೆ ವೇತನ ಅನುಕೂಲ ದೊರಕಲಿದೆ ಎಂದು ತಿಳಿಸಿದರು.

ಡಾ. ಕೆ.ಬಿ. ಧನ್ನೂರ ಮಾತನಾಡಿ, ಈ ವಯೋಮಾನದಲ್ಲಿ ಎಲ್ಲರೂ ಚಟುವಟಿಕೆಯಿಂದ ಇರಲು ಪ್ರಯತ್ನಿಸಬೇಕು. ನೀವೆಷ್ಟು ಚಟುವಟಿಕೆಯಿಂದ ಇರುತ್ತೀರೋ ಅಷ್ಟು ಆರೋಗ್ಯವನ್ನು ಪಡೆಯುತ್ತೀರಿ ಎಂದರು.

ಸಭೆಯನ್ನುದ್ದೇಶಿಸಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ, ನಿವೃತ್ತ ಶಿಕ್ಷಕ ಎಂ.ಎ. ಹಿರೆವಡೆಯರ, ನಿಕಟಪೂರ್ವ ಅಧ್ಯಕ್ಷ ಡಾ. ಆರ್.ಕೆ. ಗಚ್ಚಿನಮಠ ಇನ್ನೂ ಮುಂತಾದವರು ಮಾತನಾಡಿದರು.

ಸಭೆಯಲ್ಲಿ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವಿ.ಎ. ದಿಂಡೂರ, ಶಿವಪ್ಪ ಧರ್ಮಾಯತ, ಕೆ.ಎಂ. ಸಂಗನಾಳ, ಬಿ.ಜಿ. ಹಳ್ಳೂರ, ವೀರಪ್ಪ ಕುಂಬಾರ, ವಿ.ಬಿ. ಮೇಟಿ, ಬಿ.ಎಸ್. ಹಿರೆವಡೆಯರ, ಎಸ್.ಬಿ. ಹಿರೇಮಠ, ಕೆ.ಎಸ್. ಭಾಸಲಾಪೂರ, ಸಿ.ಎಂ. ಶಿಸ್ತಗಾರ, ಎಸ್. ಎಚ್. ಕುಲಕರ್ಣಿ, ಫಕೀರಪ್ಪ ಧರ್ಮಾಯತ ಇನ್ನೂ ಮುಂತಾದವರು ಉಪಸ್ಥಿತರಿದ್ದರು. ಎಸ್. ಕೆ. ಪಾಟೀಲ ಸ್ವಾಗತಿಸಿದರು. ಕಾರ್ಯದರ್ಶಿ ಶಿವಯೋಗಿ ಜಕ್ಕಲಿ ನಿರೂಪಿಸಿದರು. ಸಿ.ಎಂ. ಕುಲಕರ್ಣಿ ವಂದಿಸಿದರು.

ಅಧ್ಯಕ್ಷ ಡಿ.ಎ. ಅರವಟಗಿಮಠ ಮಾತನಾಡಿ, ಗದಗ ಜಿಲ್ಲಾ ಸಂಘದೊಂದಿಗೆ ನಮ್ಮ ನರೇಗಲ್ ಘಟಕವು ಅತ್ಯಂತ ಸಮೀಪದ ಸಂಬಂಧ ಹೊಂದಿದ್ದು, ಜಿಲ್ಲಾ ಸಂಘದ ನಿರ್ದೇಶನದಂತೆ ಎಲ್ಲ ಕಾರ್ಯಗಳನ್ನೂ ನಿರ್ವಹಿಸುತ್ತಿದೆ. ಸಂಘವು ಇಲ್ಲಿ ರಚನೆಯಾಗಿ ಹತ್ತು ವರ್ಷಗಳು ಕಳೆದಿದ್ದು, ಸಂಘವು ದಶಮಾನೋತ್ಸವದ ಹೊಸ್ತಿಲಲ್ಲಿದೆ. ನರೇಗಲ್ ಹೋಬಳಿ ಘಟಕದಿಂದ ಏನೇ ಸಮಸ್ಯೆಯನ್ನು ತೆಗೆದುಕೊಂಡು ಹೋದರೂ ಜಿಲ್ಲಾ ಸಂಘವು ಅದಕ್ಕೆ ಸಮರ್ಪಕವಾಗಿ ಸ್ಪಂದಿಸುತ್ತಿದೆ. ಆದ್ದರಿಂದ ಪ್ರಯೋಜನಗಳನ್ನು ಪಡೆದುಕೊಳ್ಳಲು ನಿವೃತ್ತರೆಲ್ಲರೂ ಸಂಘದ ಸದಸ್ಯರಾಗಬೇಕೆಂದು ಕರೆ ನೀಡಿದರು.


## ಕರವೇ ಸ್ವಾಭಿಮಾನಿ ಸೇನೆಯ ಪದಾಧಿಕಾರಿಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕಳೆದ 19 ವರ್ಷಗಳಿಂದ ಜಿಲ್ಲೆಯಾದ್ಯಂತ ಉತ್ತಮ ಸಂಘಟನೆಯ ಮೂಲಕ ನಾಡು, ನುಡಿ, ಜಲ, ಭಾಷೆಗೆ ಧಕ್ಕೆ ಬಂದ ಸಂದರ್ಭದಲ್ಲಿ ನಿರಂತರ ಹೋರಾಟವನ್ನು ಮಾಡುತ್ತಾ ಬರಲಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಶರಣು ಗೋಡಿ ಹೇಳಿದರು.

ಅವರು ಇಲ್ಲಿನ ಪ್ರವಾಸಿ ಮಂದಿರದಲ್ಲಿ ಶಿರಹಟ್ಟಿ ತಾಲೂಕಿನ ನೂತನ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಮಾತನಾಡಿದರು.

ರಾಜ್ಯಾಧ್ಯಕ್ಷ ನಿಂಗರಾಜ ಗೌಡ್ರು ನೇತೃತ್ವದಲ್ಲಿ ಜಿಲ್ಲೆಯಲ್ಲಿ ಇನ್ನಷ್ಟು ಶಕ್ತಿಯುತವಾಗಿ ಸಂಘಟನೆಯನ್ನು ಮಾಡಲು ಜಿಲ್ಲೆಯಾದ್ಯಂತ ತಾಲೂಕಿನಲ್ಲಿ ನೂತನವಾಗಿ ಪದಾಧಿಕಾರಿಗಳ ಆಯ್ಕೆ ಮಾಡಲಾಗುತ್ತಿದೆ ಎಂದರು.



ಸೇನೆಯ ತಾಲೂಕಾಧ್ಯಕ್ಷರಾಗಿ ವಿರೇಶ ಪಸಾರದ, ಉಪಾಧ್ಯಕ್ಷರಾಗಿ ಮಂಜುನಾಥ ದೇಸಳ್ಳಿ, ರೈತ ಘಟಕದ ಅಧ್ಯಕ್ಷರಾಗಿ ಇಸ್ಮಾಯಿಲ್ ಢಾಲಾಯತ, ಉಪಾಧ್ಯಕ್ಷರಾಗಿ ಆನಂದ ಕಾರಕಟ್ಟಿ, ತಾಲೂಕಾ ಕಾರ್ಯಾಧ್ಯಕ್ಷರಾಗಿ ದೇವರಾಜ ಶಿಂಧೆ, ಉಪಾಧ್ಯಕ್ಷರಾಗಿ ಸಲ್ಮಾನ ಕುಂದರ, ಸ.ಕಾರ್ಯದರ್ಶಿಯಾಗಿ ನೂರಅಹ್ಮದ ಮುಳಗುಂದ, ಬೆಳ್ಳಟ್ಟಿ ಗ್ರಾಮ ಘಟಕದ ಅಧ್ಯಕ್ಷರಾಗಿ ಸುಹೇಲ್ ನದಾಫ್, ಉಪಾಧ್ಯಕ್ಷರಾಗಿ ರಾಜು ಶಿರಹಟ್ಟಿ ಇವರುಗಳನ್ನು ಆಯ್ಕೆ ಮಾಡಲಾಯಿತು.

ಜಿಲ್ಲಾ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಆಡೂರ, ಉಪಾಧ್ಯಕ್ಷ ಅಜಯ ಕಂಬಳಿ, ದೇವಪ್ಪ ಶಿಂಧೆ, ಇಸ್ಮಾಯಲ್ ಢಾಲಾಯತ, ನೂರುಲ್ಲಾ ಮಕಾನದಾರ, ನೂರಅಹ್ಮದ ಮುಳಗುಂದ, ಸಂಜೀವ ಪೋತರಾಜ ಮುಂತಾದವರು ಉಪಸ್ಥಿತರಿದ್ದರು.

## ಆ.31ರಂದು ‘ರಾಜಭವನ ಚಲೋ’ : ಡಿಸಿಎಂ ಡಿ ಕೆ ಶಿವಕುಮಾರ್



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಜನಾರ್ದನ ರೆಡ್ಡಿ, ಶಶಿಕಲಾ ಜೊಲ್ಲೆ ಸೇರಿದಂತೆ ರಾಜ್ಯಪಾಲರ ಮುಂದೆ ಬಾಕಿ ಇರುವ ಹಲವರ ಪ್ರಕರಣಗಳ ವಿಚಾರಣೆಗೆ ಅನುಮತಿ ನೀಡುವಂತೆ ಆಗ್ರಹಿಸಿ ಕಾಂಗ್ರೆಸ್ ವತಿಯಿಂದ ಆಗಸ್ಟ್ 31ರಂದು ‘ರಾಜಭವನ ಚಲೋ’ ಹಮ್ಮಿಕೊಳ್ಳಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ.

ಮಂಗಳವಾರ ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು,”ಆಗಸ್ಟ್ 31ರ ಬೆಳಗ್ಗೆ 10 ಗಂಟೆಗೆ ವಿಧಾನಸೌಧದ ಗಾಂಧಿ ಪ್ರತಿಮೆಯಿಂದ ರಾಜಭವನಕ್ಕೆ ತೆರಳಿ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವುದು. ಈ ವೇಳೆ ಮುಖ್ಯಮಂತ್ರಿ, ಎಲ್ಲಾ ಸಚಿವರು, ಕಾಂಗ್ರೆಸ್‌ನ ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಸಂಸದರು ಉಪಸ್ಥಿತರಿರಲಿದ್ದಾರೆ” ಎಂದು ಹೇಳಿದರು.

“ಬೇರೆ ನಾಯಕರ ವಿರುದ್ಧ ಪ್ರಾಥಮಿಕ ತನಿಖೆ ನಡೆದು ವಿಚಾರಣೆಗೆ ಅನುಮತಿ ಕೇಳಿದ್ದರೂ ರಾಜ್ಯಪಾಲರು ನೀಡಿಲ್ಲ. ಆದರೆ, ಯಾವುದೇ ಪ್ರಾಥಮಿಕ ತನಿಖೆ ನಡೆಯದಿದ್ದರೂ ಮುಖ್ಯಮಂತ್ರಿಗಳ ವಿರುದ್ಧ ವಿಚಾರಣೆಗೆ ತರಾತುರಿಯಲ್ಲಿ ಅನುಮತಿ ನೀಡಿದ್ದಾರೆ. ಹೀಗಾಗಿ, ಕಳೆದ ವಾರ ನನ್ನ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯಪಾಲರಿಗೆ ಕೆಲವು ಸಲಹೆಗಳನ್ನು ಕಳುಹಿಸಿದ್ದೆವು. ಮುಖ್ಯಮಂತ್ರಿಗಳ ಪ್ರಕರಣ ನ್ಯಾಯಾಲಯದಲ್ಲಿದೆ. ಆದ್ದರಿಂದ ಈ ಬಗ್ಗೆ ಹೆಚ್ಚಿನ ವಿಚಾರ ಪ್ರಸ್ತಾಪ ಮಾಡುವುದಿಲ್ಲ. ನ್ಯಾಯಾಲಯ ಕಾನೂನಿನ ಪ್ರಕಾರ ಯಾವ ತೀರ್ಮಾನ ಮಾಡಬೇಕೋ ಮಾಡಲಿದೆ” ಎಂದರು.

**ಹೆಚ್‌ಡಿಕೆ ವಿರುದ್ಧ ಕಿಡಿ :** “ನಮ್ಮ ಬಿಗ್ ಬ್ರದರ್ ಕುಮಾರಸ್ವಾಮಿ ಸಾಚಾ ಕೆಲಸ ಮಾಡುವವರು. ಅವರ ವಿರುದ್ಧ 10 ವರ್ಷಗಳ ಹಿಂದೆಯೇ ಕೇಸು ದಾಖಲಾಗಿದೆ. 2023ರ ನವೆಂಬರ್ 21ರಂದು ಲೋಕಾಯುಕ್ತ ಎಸ್‌ಐಟಿ ಅಧಿಕಾರಿಗಳು ಕೂಡ ರಾಜ್ಯಪಾಲರಿಗೆ ಪತ್ರ ಬರೆದಿದ್ದಾರೆ. ನಾವೇನೂ ತಿರುಚಿ ಪರಚಿ ಮಾತಾಡುತ್ತಿಲ್ಲ. 218 ಪುಟಗಳ ತನಿಖಾ ವರದಿಯನ್ನು ರಾಜ್ಯಪಾಲರಿಗೆ ಎಸ್‌ಐಟಿ ನೀಡಿದೆ. ಬಹಳ ಸತ್ಯಕ್ಕೆ ಹೆಸರಾದವರು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ನಾನು ಸಹಿಯೇ ಮಾಡಿಲ್ಲ ಎಂದು ಹೇಳಿದ್ದಾರೆ. ಅವರ ಹೇಳಿಕೆ ನೋಡಿ ನನಗೆ ಆಶ್ಚರ್ಯ ಆಯ್ತು” ಎಂದು ಡಿಕೆಶಿ ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದರು.

“ಅವರ ಸಹಿ ಅಲ್ಲ ಅಂದಮೇಲೆ ಯಾರೋ ಫೋರ್ಜರಿ ಮಾಡಿದ್ದಾರೆ. ಸಹಿ ಫೋರ್ಜರಿ ಮಾಡಿದ್ದಾರೆ ಎಂದು ಯಾಕೆ ದೂರು ಕೊಟ್ಟಿಲ್ಲ?. ಸಹಿ ಫೋರ್ಜರಿ ಆಗಿದ್ದಿದ್ದರೆ ಒಬ್ಬ ಪಿಸಿಗಾದರೂ ದೂರು ಕೊಡಬೇಕಲ್ವಾ? ಎಂದು ಪ್ರಶ್ನಿಸಿದರು.

“ನಾನು ಅವರ ಕುಟುಂಬದ ಆಸ್ತಿ ಬಗ್ಗೆ ಅನೇಕ ಪ್ರಶ್ನೆ ಕೇಳಿದ್ದೆ. ಈವರೆಗೂ ಅವರು ಅದಕ್ಕೆ ಉತ್ತರ ನೀಡಿಲ್ಲ. ನನ್ನ ಕುಟುಂಬದ ಸುದ್ದಿಗೆ ಬರುತ್ತೀಯಾ? ಎಂದೆಲ್ಲಾ ಅವರು ಕಿಡಿಕಾರಿದ್ದಾರೆ. ಅವರು ಕೂಡ ಯಾರ ಕುಟುಂಬದ ವಿಚಾರಕ್ಕೆ ಹೋಗಿದ್ದಾರೆ ಎಂಬುವುದನ್ನು ಹೇಳಬೇಕು. ಅವರು ಹೇಗೆ ಬೇರೆಯವರ ಕುಟುಂಬದ ವಿಚಾರಕ್ಕೆ ಹೋಗುತ್ತಾರೋ, ಅದೇ ರೀತಿ ಬೇರೆಯವರು ಅವರ ಕುಟುಂಬದ ವಿಚಾರಕ್ಕೆ ಹೋಗುತ್ತಾರೆ” ಎಂದು ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ ಚಂದ್ರಶೇಖರ್, ಕಾಂಗ್ರೆಸ್ ವಕ್ತಾರ ಎಂ.ಲಕ್ಷ್ಮಣ್, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸೌಮ್ಯಾ ರೆಡ್ಡಿ, ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸಾಧು ಕೋಕಿಲ, ಕೆಪಿಸಿಸಿ ಅಧ್ಯಕ್ಷರ ರಾಜಕೀಯ ಕಾರ್ಯದರ್ಶಿ ದೀಪಕ್ ತಿಮ್ಮಯ ಹಾಗೂ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವಿಜಯ್ ಮುಳಗುಂದ, ರಾಮಚಂದ್ರಪ್ಪ ಉಪಸ್ಥಿತರಿದ್ದರು.

## ವಿಜಯ ಪ್ರಾಥಮಿಕ ಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಿಜಯ ಪ್ರಾಥಮಿಕ ಶಾಲೆಯಲ್ಲಿ ಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ವಿಜಯ ಫೈನ್ ಆರ್ಟ್ ಸೊಸೈಟಿಯ ಕಾರ್ಯದರ್ಶಿ ಸಂತೋಷ ಅಕ್ಕಿ ಮಾತನಾಡಿ, ಕೃಷ್ಣ ಹುಟ್ಟಿದ ದಿನವನ್ನು ಕೃಷ್ಣ ಜನ್ಮಾಷ್ಟಮಿ ಅಥವಾ ಗೋಕುಲಾಷ್ಟಮಿ ಎಂದು ವೈಭವದಿಂದ ಆಚರಿಸುತ್ತಾರೆ. ಶ್ರೀಕೃಷ್ಣ ಜನ್ಮದಿನವನ್ನು ಚಂದ್ರಮಾನ ರೀತಿಯಲ್ಲಿ ಶ್ರಾವಣ ಕೃಷ್ಣ ಅಷ್ಟಮಿಯಂದು, ಸೌರಮಾನ ರೀತಿಯಲ್ಲಿ ಸಿಂಹಮಾಸದ ರೋಹಿಣಿ ನಕ್ಷತ್ರದ ದಿನ ಆಚರಿಸುತ್ತಾರೆ. ಕೃಷ್ಣ ಹೇಳಿದ ಭಗವದ್ಗೀತೆಯಲ್ಲಿಯ ಶ್ಲೋಕಗಳು ಜೀವನ ಸಾರವನ್ನು ಹೇಳುತ್ತದೆ.

ಅಸಂಖ್ಯಾತ ಸಾಧಕರಿಗೆ ಸ್ಫೂರ್ತಿದಾಯಕವಾದ ಕೃಷ್ಣನ ಸಂದೇಶವನ್ನು ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಂಡರೆ ಜೀವನವು ಸಾರ್ಥಕವಾಗುತ್ತದೆ ಎಂದು ಹೇಳಿದರು.



ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಅಶೋಕ ಅಕ್ಕಿ, ಮುಖ್ಯ ಅಥಿತಿಗಳಾದ ಬಿ.ಎಫ್. ಚೇಗರೆಡ್ಡಿ, ಸಾಗರಿಕಾ ಅಕ್ಕಿ, ಪಿಯು ಕಾಲೇಜಿನ ಪ್ರಾಚಾರ್ಯರಾದ ಶ್ರೀದೇವಿ ವಿ.ವಾಯ್, ಮುಖ್ಯೋಪಾಧ್ಯಾಯರಾದ ರೇಷ್ಮಾ ಗಾಣಿಗೇರ, ರೇಖಾ ಮಳೇಕರ್ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಅಮೃತ ಭೋಜನದ ಸವಿ

■ವಿಜಯಸಾಕ್ಷಿ ಸುದ್ದಿ, ನರೇಗಲ್

ದಿನಕ್ಕೊಂದು ಬಗೆಯ ಸಿಹಿಯನ್ನು ಸವಿಯುವ ಅವಕಾಶ ಇಲ್ಲಿನ ಕೆಜಿಎಸ್ ಶಾಲೆಯ ಮಕ್ಕಳಿಗೆ ಪ್ರತಿ ಶ್ರಾವಣದಲ್ಲಿ ದೊರಕುತ್ತದೆ. ಈ ಸವಿ ಅಮೃತ ಭೋಜನದ ವೆಚ್ಚವನ್ನು ಪ್ರತಿ ದಿನ ಒಬ್ಬ ದಾನಿಗಳು ವಹಿಸಿಕೊಂಡು ಮಕ್ಕಳಿಗೆ, ಸಿಬ್ಬಂದಿಗೆ ಸಿಹಿಯೂಟದ ಅಮೃತ ಭೋಜನ ಮಾಡಿಸಿ ಸಂತೋಷ ಪಡುತ್ತಿದ್ದಾರೆ.

ಸೋಮವಾರದ ಅಮೃತ ಭೋಜನದ ಸೇವೆಯನ್ನು ಎಂಸಿಎಸ್ ಗೆಳೆಯರ ಬಳಗ ಹಾಗೂ ರಾಗಿ ಸಿದ್ದಪ್ಪನವರ ಕುಟುಂಬದವರು ವಹಿಸಿಕೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ಬಿ.ಬಿ. ಕುರಿ, ಶ್ರಾವಣ ಮಾಸದ ನಿಮಿತ್ತ ಅಮೃತ ಭೋಜನವನ್ನು ಪ್ರತಿದಿನ ಮಕ್ಕಳಿಗೆ ಮಾಡಿಸಲು ನನ್ನ ಮನಸ್ಸಿನಲ್ಲಿ ಬಂದಿದ್ದು, ಎಲ್ಲರಲ್ಲಿ ಚರ್ಚಿಸಿ ಅಮೃತ ಭೋಜನ ಯೋಜನೆ ಆರಂಭಿಸಲಾಯಿತು. ಗ್ರಾಮದ ದಾನಿಗಳು ಪ್ರತಿನಿತ್ಯದ ಊಟದ ಖರ್ಚನ್ನು ಭರಿಸಿದ್ದಾರೆ. ಅವರೆಲ್ಲರಿಗೂ ಅಭಿನಂದನೆಗಳು ಎಂದರು.



ಎಂಸಿಎಸ್ ಗೆಳೆಯರ ಬಳಗದ ಹಾಗೂ ಸಿದ್ದಪ್ಪ ರಾಗಿ ಕುಟುಂಬದವರಿಗೆ ಶಾಲೆಯ ವತಿಯಿಂದ ಸನ್ಮಾನ ಜರುಗಿತು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ, ಎಂ.ಎಸ್. ಮಾಳಶೆಟ್ಟಿ, ಎಸ್.ಎಚ್. ಹಾದಿಮನಿ, ಎನ್.ವಿ. ಚೌವಾಣ, ಎಂ.ಪಿ. ಅಣಗೌಡ್ರ, ಜೆ.ಎ. ಪಾಟೀಲ, ಡಿ.ವಿ. ಕಳ್ಳಿ, ಎಸ್.ಐ. ಜಾಗಾಪೂರ, ರಾಜೇಶ್ವರಿ ತೊಂಡಿಹಾಳ, ಎಚ್. ಎಫ್. ಕಡ್ಲಿಮಟ್ಟಿ, ಬಿ.ಡಿ. ಹಳ್ಳದಮನಿ ಸೇರಿದಂತೆ ಇತತರಿದ್ದರು.




ಲಕ್ಷ್ಮೇಶ್ವರದ ದಿ ಯೂನಿಕ್ ಆಂಗ್ಲ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಶ್ರೀ ಕೃಷ್ಣ ಜನ್ಮಾಷ್ಟಮಿ ನಿಮಿತ್ತ ಮಕ್ಕಳು ಕೃಷ್ಣ-ರುಕ್ಮಿಣಿಯರ ವೇಷ ಧರಿಸಿ ಸಂಭ್ರಮಿಸಿ ಕಣ್ಮನ ಸೆಳೆದರು.

# ಪೈಗಂಬರ ಜಯಂತಿಯ ಪೂರ್ವಭಾವಿ ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ-ಬೆಟಗೇರಿಯಲ್ಲಿ ಪ್ರವಾದಿ ಪೈಗಂಬರ ಜಯಂತಿ ಆಚರಿಸುವ ಕುರಿತು ಅವಳಿ ನಗರದ ಎಲ್ಲಾ ಯುವಕರು ಹಾಗೂ ಜಮಾತಿನ ಮುಖಂಡರು ಮತ್ತು ಮುಸ್ಲಿಂ ಸಮುದಾಯದ ಜನ ಪ್ರತಿನಿಧಿಗಳು ಗದಗ ನಗರದ ಹಳೆ ಬಸ್‌ನಿಲ್ದಾಣದ ಹತ್ತಿರವಿರುವ ಉರ್ದು ಸರ್ಕಾರಿ ಶಾಲೆಯ ನಂ. 2ರಲ್ಲಿ ಸಭೆ ಕರೆಯಲಾಗಿದೆ.

ಆಗಸ್ಟ್ 29ರ ಸಾಯಂಕಾಲ 5.30ಕ್ಕೆ ಉರ್ದು ಶಾಲೆ ಆವರಣದಲ್ಲಿ ಅವಳಿ ನಗರದ ಹಿರಿಯರ ಸಮುಖದಲ್ಲಿ ಪ್ರವಾದಿ ಪೈಗಂಬರ ಜಯಂತಿ ಆಚರಣೆ ನಿಮಿತ್ತ ಸಭೆ ಆಯೋಜಿಸಲಾಗಿದ್ದು, ಅವಳಿ ನಗರದ ಮುಸ್ಲಿಂ ಸಮಾಜದ ಸಮಾಜ ಬಾಂಧವರು ಸಭೆಗೆ ಆಗಮಿಸಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಬೇಕೆಂದು ಈದ್ ಮಿಲಾದ ಕಮಿಟಿಯ ಮಾಜಿ ಅಧ್ಯಕ್ಷ ಅಬ್ದುಲ್‌ರೆಹಮಾನ ರಾಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

‘ಬಸವಾದಿ ಶರಣರ ವಚನಗಳ ಜ್ಞಾನಾಮೃತ’ ಉಪನ್ಯಾಸದಲ್ಲಿ ಪ್ರೊ. ಸಜ್ಜನಶೆಟ್ಟರ

# ಕಾಯಕ ಸತ್ಯ, ಶುದ್ಧವಾಗಿರಲಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಎಲ್ಲ ಬಸವಾದಿ ಶರಣರು ಹಾಕಿಕೊಟ್ಟ ದಾರಿಯಲ್ಲಿ ನಡೆಯಬೇಕು. ಶರಣರ ವಚನಗಳು ಅಮೃತವಿದ್ದಂತೆ ಮತ್ತು ಬದುಕಿಗೆ ದಾರಿ ದೀಪದಂತೆ. ವಿದ್ಯಾರ್ಥಿಗಳು ಜೀವನದಲ್ಲಿ ನಯ-ವಿನಯದಿಂದ ನಡೆದುಕೊಳ್ಳಬೇಕು. ನಡೆ-ನುಡಿ ಹೇಗಿರಬೇಕೆಂದರೆ, ನವಿಲು ಗರಿಬಿಚ್ಚಿ ಕುಣಿಯುವಂತಿರಬೇಕು ಎಂದು ಗದಗ ಸರಕಾರಿ ಮಹಿಳಾ ಪ್ರಥಮದರ್ಜೆ ಕಾಲೇಜಿನ ಪ್ರಾಧ್ಯಾಪಕ ಪ್ರೊ. ಸಿದ್ಧಲಿಂಗೇಶ ಸಜ್ಜನಶೆಟ್ಟರ ಹೇಳಿದರು.

ಅವರು ನಗರದ ತೋಂಟದ ಸಿದ್ಧೇಶ್ವರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಶ್ರಾವಣ ಮಾಸದ ಪ್ರಯುಕ್ತ ತಾಲೂಕಾ ಕದಳಿ ಮಹಿಳಾ ವೇದಿಕೆಯಿಂದ ಏರ್ಪಡಿಸಲಾಗಿದ್ದ ‘ಬಸವಾದಿ ಶರಣರ ವಚನಗಳ ಜ್ಞಾನಾಮೃತ’ ವಿಷಯ ಕುರಿತು ಉಪನ್ಯಾಸ ನೀಡುತ್ತಿದ್ದರು.

ನಾವು ಸಂಪೂರ್ಣವಾಗಿ ಶರಣರೇ ಆಗಲು ನಾವು ಎಷ್ಟು ಸಾಧ್ಯವೋ ಅಷ್ಟು ಶರಣ ಮಾರ್ಗದಲ್ಲಿ ನಡೆಯಬೇಕು. ಕಾಯಕದೊಳಗೆ ನಿರತರಾಗಬೇಕು. ಅಂದರೆ ನಾವು ಜೀವನದಲ್ಲಿ ಏನಾದರೂ ಸಾಧಿಸಲು ಸಾಧ್ಯವಾಗುತ್ತದೆ. ಕಾಯಕವು ಹೇಗಿರಬೇಕೆಂದರೆ ಸತ್ಯವಾಗಿಯೂ, ಶುದ್ಧವಾಗಿಯೂ ಇರಬೇಕು. ವಿದ್ಯಾರ್ಥಿಗಳಾದ ನೀವು ಮನಸ್ಸು ಮಾಡಿದರೆ ಏನು ಬೇಕಾದರೂ ಸಾಧಿಸಲು ಸಾಧ್ಯವಾಗುತ್ತದೆ. ನಿಮ್ಮಲ್ಲಿ ಒಳ್ಳೆ ಚಿಂತನೆ ಒಳ್ಳೆ ಛಲಗಳಿರಬೇಕು. ನೀವು ಏನನ್ನು ಸಾಧಿಸಬೇಕಾದರೂ ಶರಣರ ಅನುಭವದ ನುಡಿ ಮುತ್ತುಗಳಾದ ವಚನಗಳ ಅಧ್ಯಯನ ಮಾಡುವುದರಿಂದ ಮತ್ತು ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರಿಂದ ನಿಮ್ಮ ಬದುಕು ಸಾರ್ಥಕವಾಗುತ್ತದೆ. ನೀವು ಕೂಡಾ ಮತ್ತೊಬ್ಬರಿಗೆ ಆದರ್ಶಪ್ರಾಯರಾಗಿ ಸಮಾಜದಲ್ಲಿ ಒಳ್ಳೆಯ ವ್ಯಕ್ತಿತ್ವವನ್ನು ರೂಪಿಸಿಕೊಳ್ಳುತ್ತೀರಿ ಎಂದು ಮುಟ್ಟುವಂತೆ ಹಾಸ್ಯ ಚಟಾಕಿಗಳೊಂದಿಗೆ ಉಪನ್ಯಾಸ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತೋಂಟದ ಸಿದ್ಧೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕರಾದ ಸುರೇಶ ಎಸ್. ಭಜಂತ್ರಿ ‘ಬಸವಾದಿ ಶರಣರ ವಚನಗಳ ಜ್ಞಾನಾಮೃತ’ ಎಂಬ ವಿಷಯ ಕುರಿತು ಉಪನ್ಯಾಸ ಮಾಡಲು ನಮ್ಮ ಕಾಲೇಜನ್ನು ಆಯ್ಕೆ ಮಾಡಿಕೊಂಡಿದ್ದು ತುಂಬಾ ಸಂತೋಷ ತಂದಿದೆ. ಇಂದು ವಿದ್ಯಾರ್ಥಿಗಳು ತಂತ್ರಜ್ಞಾನಗಳ ಅಭಿವೃದ್ಧಿಯಿಂದ ವಿದ್ಯಾವಂತರಾಗಿ ಬೆಳೆದರೆ ಸಾಲದು, ಜೊತೆಗೆ ಅವರಿಗೆ ಇಂಥ ವಚನ ಚಿಂತನೆಗಳು ವಿದ್ಯಾರ್ಥಿಗಳಲ್ಲಿ ವೈಚಾರಿಕ ಭಾವನೆ ಮೂಡಿಸುತ್ತವೆ ಎಂದರು.

ವಚನ ಪ್ರಾರ್ಥನೆಯನ್ನು ನಯನಾ ಅಳವಂಡಿ ಹಾಡಿದರು. ಸ್ವಾಗತ ಮತ್ತು ನಿರೂಪಣೆಯನ್ನು ಮಂಜುಳಾ ಎಫ್. ಅಕ್ಕಿ, ವಂದನಾರ್ಪಣೆಯನ್ನು ಕಲಾವತಿ ಸಂಕನಗೌಡರ ಮಾಡಿದರು.

ತಾಲೂಕಾ ಕದಳಿ ಮಹಿಳಾ ವೇದಿಕೆಯ ಉಪಾಧ್ಯಕ್ಷೆ ರೇಣುಕಾ ವಿ.ಕರೇಗೌಡ್ರ, ಬಸವದಳದ ಅಧ್ಯಕ್ಷ ವಿ.ಕೆ. ಕರೇಗೌಡ್ರ, ಪ್ರಾಧ್ಯಾಪಕರಾದ ಡಾ. ಎಮ್.ವ್ಹಿ. ಐಹೊಳ್ಳಿ, ಪ್ರೇಮಾ ಮೇಟಿ ಹಾಗೂ ಕಾಲೇಜಿನ ಎಲ್ಲಾ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಉದ್ಘಾಟಕರಾಗಿ ಆಗಮಿಸಿದ ತಾಲೂಕಾ ಕದಳಿ ಮಹಿಳ ವೇದಿಕೆ ಗೌರವಾಧ್ಯಕ್ಷರಾದ ರತ್ನಕ್ಕ ಪಾಟೀಲರವರು ಮಾತನಾಡುತ್ತಾ, ವಿದ್ಯಾರ್ಥಿಗಳು ಪಠ್ಯ-ಪುಸ್ತಕಗಳೊಂದಿಗೆ ವಚನಗಳ ಮೌಲ್ಯಯುತ ಪುಸ್ತಕಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳುವದರಿಂದ ನಿಮ್ಮ ಜೀವನ ಶೈಲಿಯೇ ಬದಲಾಗುತ್ತದೆ. ಆದ್ದರಿಂದ ನೀವು ಈ ಶರಣ-ಶರಣೆಯರ ವಚನಗಳನ್ನು ಓದುವದರಲ್ಲಿ ಆಸಕ್ತಿ ತೋರಿಸಿ. ನಿಮ್ಮ ಬಾಳು ಬಂಗಾರವಾಗುವುದರಲ್ಲಿ ಅನುಮಾನವೇ ಇಲ್ಲ ಎಂದರು.

---

## ನಿಧನ ವಾರ್ತೆ

### ಸುವರ್ಣಾದೇವಿ ದೇಸಾಯಿ



ಧಾರವಾಡ: ತಾಲೂಕಿನ ನರೇಂದ್ರ ಗ್ರಾಮದ ಪ್ರತಿಷ್ಠಿತ ದೇಸಾಯಿ ಮನೆತನದ ಸುವರ್ಣಾದೇವಿ ಅಪ್ಪಾಸಾಹೇಬ ದೇಸಾಯಿ ಆಗಸ್ಟ್ 26ರಂದು ನಿಧನರಾದರು. ಅವರಿಗೆ 84 ವರ್ಷ ವಯಸ್ಸಾಗಿತ್ತು. ಆ.27ರಂದು, ನರೇಂದ್ರ ಗ್ರಾಮದ ದೇಸಾಯಿಯವರ ತೋಟದಲ್ಲಿ ಪಾರ್ಥಿವ ಶರೀರದ ಅಂತ್ಯಕ್ರಿಯೆ ಜರುಗಿತು. ಮಾಜಿ ಶಾಸಕರಾದ ಎ.ಬಿ. ದೇಸಾಯಿ, ಅಮೃತ ದೇಸಾಯಿ ಹಾಗೂ ಅರವಿಂದ ದೇಶಮುಖ ನಾಲತವಾಡ ಸೇರಿದಂತೆ ಅನೇಕ ಗಣ್ಯರು ಸುವರ್ಣಾದೇವಿಯವರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.

---

ಕೇಂದ್ರ ಸರಕಾರದ ವಿವಿಧ ಯೋಜನೆಗಳ ವಿಶೇಷ ಜಾಗೃತಿ ಜಾಥಾ

# ಜಾಥಾದಿಂತ ಜನರಲ್ಲಿ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ಪಟ್ಟಣದಲ್ಲಿ ಮಂಗಳವಾರ ಕೇಂದ್ರ ಸಂವಹನ ಇಲಾಖೆ, ತಾಲೂಕ ಆಡಳಿತ, ತಾ.ಪಂ ಶಿಶು ಅಭಿವೃದ್ಧಿ ಯೋಜನೆ, ಆರೋಗ್ಯ, ಕೃಷಿ, ತೋಟಗಾರಿಕೆ, ಪೊಲೀಸ್, ಶಿಕ್ಷಣ ಇಲಾಖೆ, ಪುರಸಭೆ ಹಾಗೂ ವಿವಿಧ ಶಾಲಾ-ಕಾಲೇಜುಗಳ ಸಂಯುಕ್ತಾಶ್ರಯದಲ್ಲಿ ಹೊಸ ಕ್ರಿಮಿನಲ್ ಕಾನೂನುಗಳು, ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆ, ವಿಕಸಿತ ಭಾರತ ಬಜೆಟ್, ದೂರದೃಷ್ಟಿ-2047, ಏಕ್ ಭಾರತ ಶ್ರೇಷ್ಠ ಭಾರತ ಹಾಗೂ ಕೇಂದ್ರ ಸರಕಾರದ ವಿವಿಧ ಯೋಜನೆಗಳ ವಿಶೇಷ ಜಾಗೃತಿ ಜಾಥಾಕ್ಕೆ ಪಿಎಸ್‌ಐ ಈರಪ್ಪ ರಿತ್ತಿ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ತಾಲೂಕು ಮಟ್ಟದ ಭಾಷಣ ಹಾಗೂ ಚಿತ್ರಕಲೆ ಸ್ಪರ್ಧೆಯನ್ನು ಕ್ಷೇತ್ರ ಪ್ರಚಾರಕ ಜಿ.ತುಕಾರಾಮಗೌಡ ಉದ್ಘಾಟಿಸಿ ಮಾತನಾಡಿ, ಕೇಂದ್ರ ಸರ್ಕಾರದ ಕಾನೂನು ಹಾಗೂ ಯೋಜನೆಗಳ ಅರಿವು ಮೂಡಿಸಲು ಈ ಕಾರ್ಯಕ್ರಮ ಉಪಯುಕ್ತವಾಗಿದೆ ಎಂದರು.

ಶಿರಸ್ತೇದಾರ ಮನಿಯಾರ್ ಮಾತನಾಡಿ, ಇಂತಹ ಕಾರ್ಯಕ್ರಮಗಳಿಂದ ಸರ್ಕಾರದ ಯೋಜನೆಗಳು ಹಾಗೂ ರೂಪಿಸಿರುವ ಕಾನೂನುಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬಹುದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೆಚ್.ಬಿ. ಸಣ್ಣಮನಿ ವಹಿಸಿದ್ದರು. ಈಶ್ವರ್ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂ.ಸಿ. ಬಣಗಾರ, ಬಿ.ಬಿ. ದನದಮನಿ, ಆರ್.ಬಿ. ಜೋಶಿ ನಿರ್ಣಾಯಕರಾಗಿದ್ದರು. ಸತೀಶ್ ಬೋಮಲೆ ಸ್ವಾಗತಿಸಿದರು, ಉಮೇಶ್ ನೇಕಾರ ನಿರೂಪಿಸಿದರು. ಎಸ್.ಎನ್. ತಾಯಮ್ಮನವರ ವಂದಿಸಿದರು. ಕಾರ್ಯಕ್ರಮದಲ್ಲಿ ಮುರಳೀಧರ ಕಾರಭಾರಿ ಹಾಗೂ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದರು.

ವಿವಿಧ ಶಾಲೆಗಳ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಕರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಕ್ಷೇತ್ರ ಪ್ರಚಾರಕರಾದ ಜಿ.ತುಕಾರಾಮಗೌಡ ಹಾಗೂ ಶಿರಸ್ತೇದಾರ ಮನಿಯಾರ ಮುರುಳೀಧರ ಕಾರಭಾರಿ, ಬಿಆರ್‌ಪಿ.ಈಶ್ವರ ಮೆಡ್ಲೇರಿ, ಬಿ.ಎಂ.ಕುಂಬಾರ, ಎಸ್.ಎಸ್.ಜೀರಂಕಳ್ಳಿ, ಡಿ.ಎನ್.ದೊಡ್ಡಮನಿ, ಆಯ್.ಬಿ.ಜಕ್ಕನಗೌಡ್ರ ಸಿ.ಆರ್.ಪಿ.ಗಳಾದ ಸತೀಶ ಬೋಮಲೆ, ಉಮೇಶ ನೇಕಾರ ಹಾಜರಿದ್ದರು.

### ಸ್ಪರ್ಧಾ ವಿಜೇತರು

ಭಾಷಣ ಸ್ಪರ್ಧೆ: ಶ್ರಾವ್ಯ ಹಿರೇಮಠ-ಆಕ್ಸ್‌ಫರ್ಡ್ ಶಾಲೆ(ಪ್ರಥಮ), ರೇಖಾ ಬಾಕಳೆ-ಸರ್ಕಾರಿ ಪ್ರೌಢಶಾಲೆ (ದ್ವಿತೀಯ), ವಿನುತಾ ಘೋರ್ಪಡೆ-ದಿ ಯೂನಿಕ್ ಶಾಲೆ(ತೃತೀಯ).

ಚಿತ್ರಕಲಾಸ್ಪರ್ಧೆ: ಉಮೇಶ್ ಪೂಜಾರ್- ಮೊರಾರ್ಜಿ ವಸತಿ ಶಾಲೆ, ಒಡೆಯರ ಮಲ್ಲಾಪುರ(ಪ್ರಥಮ), ಖದೀಜಾ ಸೂರಣಗಿ-ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆ(ದ್ವಿತೀಯ), ಅಲ್ಫಿಯಾ ಮರ್ದಾನಿ-ದೂದಪಿರಾಂ ಸರ್ಕಾರಿ ಉರ್ದು ಪ್ರೌಢಶಾಲೆ (ತೃತೀಯ)

ಆ.28ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ಸಭಾಂಗಣದಲ್ಲಿ ನಡೆಯುವ ಕೇಂದ್ರ ಸರ್ಕಾರದ ಯೋಜನೆಗಳ ಕುರಿತ ವಿಶೇಷ ಜಾಗೃತಿ ಕಾರ್ಯಕ್ರಮದಲ್ಲಿ ಪ್ರಶಸ್ತಿ ವಿತರಣೆ ನಡೆಯಲಿದೆ.

---

ವಲಯ ಮಟ್ಟದ ಪ್ರಾಥಮಿಕ ಶಾಲಾ ಕ್ರೀಡಾಕೂಟದಲ್ಲಿ ಆರ್.ಎನ್. ಹುರಳಿ ಕರೆ

# ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ನರೇಗಲ್

ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಹಕಾರಿಯಾದ ಕ್ರೀಡೆ ನಮ್ಮ ಜೀವನದ ಪ್ರಮುಖ ಭಾಗವಾಗಿದ್ದು, ವಿದ್ಯಾರ್ಥಿಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳುವ ಮೂಲಕ ಉತ್ತಮ ನಾಯಕತ್ವ, ವ್ಯಕ್ತಿತ್ವ ಮೈಗೂಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎನ್. ಹುರಳಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅವರು ಸಮೀಪದ ಅಬ್ಬಿಗೇರಿಯ ಬಾಲಕ/ಬಾಲಕಿಯರ ಸರಕಾರಿ ಮಾದರಿ ಕೇಂದ್ರ ಶಾಲಾ ಮೈದಾನದಲ್ಲಿ ಗದಗ ಜಿಲ್ಲಾ ಪಂಚಾಯಿತಿ, ರೋಣ ತಾಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಅಬ್ಬಿಗೇರಿ ಗ್ರಾ.ಪಂ, ಎಸ್‌ಡಿಎಂಸಿ ಅಧ್ಯಕ್ಷರು, ಸರ್ವ ಸದಸ್ಯರು, ಗ್ರಾಮದ ಬಾಲಕ/ಬಾಲಕಿಯರ ಸರಕಾರಿ ಮಾದರಿ ಕೇಂದ್ರ ಹಾಗೂ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆ ಇವರ ಸಹಯೋಗದಲ್ಲಿ ನಡೆದ 2024-25ನೇ ಸಾಲಿನ ನರೇಗಲ್ಲ ವಲಯ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಡಿಎಮ್‌ಸಿ ಅಧ್ಯಕ್ಷ ದೇವಪ್ಪ ಬಿಲ್ಲಾರ್ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷ ನೀಲಪ್ಪ ದ್ವಾಸಲ ಧ್ವಜಾರೋಹಣ ನೆರವೇರಿಸಿದರು.

ಮುಖ್ಯ ಅತಿಥಿಗಳಾಗಿ ಎಸ್‌ಡಿಎಂಸಿ ಅಧ್ಯಕ್ಷ ಪರಸಪ್ಪ ಹಡಪದ, ಮುಖಂಡರಾದ ಡಾ. ಆರ್.ಬಿ. ಬಸವರಡ್ಡೇರ, ಪಿಡಿಓ ಎಮ್. ಲೋಹಿತ, ಸಿಆರ್‌ಪಿ ಎಸ್. ಆರ್. ಮೂಲಿಮನಿ, ಬಸವರಾಜ ತಳವಾರ, ಭೀಮಶಿ ಮಲ್ಲಾಪೂರ, ರಾಯಪ್ಪ ತಾಳಿಕೋಟಿ, ಸುರೇಶ ಶಿರೋಳ, ಶರಣಪ್ಪ ಪಸಾರದ ಉಪಸ್ಥಿತರಿದ್ದರು.

ರೋಣ ತಾಲೂಕಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಕೆ. ಕೇಸರಿ ಕ್ರೀಡಾ ಜ್ಯೋತಿಯನ್ನು ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಖ್ಯ ಶಿಕ್ಷಕ ಡಿ.ಎಚ್. ಪರಂಗಿ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕರಾದ ಆರ್.ವ್ಹಿ. ಬೆಲ್ಲದ ಸ್ವಾಗತಿಸಿದರು. ಆರ್.ಡಿ. ರಂಗಣ್ಣವರ ವಂದಿಸಿದರು. ಕ್ರೀಡಾಕೂಟದಲ್ಲಿ ನರೇಗಲ್ಲ ವಲಯದ 7 ಗ್ರಾ.ಪಂ.ಗಳ ಪ್ರಾಥಮಿಕ ಶಾಲಾ ಮಕ್ಕಳು ಭಾಗವಹಿಸಿದ್ದರು.

---

# ಶ್ರೀಕೃಷ್ಣ ಲೋಕೋದ್ಧಾರಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಪಾಂಡುರಂಗ ದೇವಸ್ಥಾನದಲ್ಲಿ ಭಾವಸಾರ ಕ್ಷತ್ರಿಯ ಸಮಾಜದ ಶ್ರೀಮಾತಾ ಹಿಂಗುಲಾಂಬಿಕಾ ಮಹಿಳಾ ಮಂಡಳಿಯವರು ಸೋಮವಾರ ರಾತ್ರಿ 12 ಗಂಟೆಗೆ ಕೃಷ್ಣ ಜನ್ಮಾಷ್ಟಮಿ ನಿಮಿತ್ತ ಶ್ರೀ ಕೃಷ್ಣನ ತೊಟ್ಟಿಲೋತ್ಸವ ನೆರವೇರಿಸಿದರು.

ಈ ವೇಳೆ ಮಾತನಾಡಿದ ಮಹಿಳಾ ಮಂಡಳದದ ಮುಖ್ಯಸ್ಥರು, ದುಷ್ಟರ ಶಿಕ್ಷಕ-ಶಿಷ್ಟರ ರಕ್ಷಕ ಶ್ರೀಕೃಷ್ಣ ಪರಮಾತ್ಮ ಲೋಕೋದ್ಧಾರಕನಾಗಿದ್ದಾನೆ. ಭಗವದ್ಗೀತೆಯ ಮೂಲಕ ಶ್ರೀ ಕೃಷ್ಣ ಪರಮಾತ್ಮ ಬೋಧಿಸಿದ ಜೀವನ ಧರ್ಮ, ಮೌಲ್ಯ, ಆಧ್ಯಾತ್ಮಿಕ ಸಂದೇಶಗಳು ಬದುಕಿನ ಸೋಪಾನಗಳಾಗಿವೆ. ನಿತ್ಯದ ಬದುಕಿನಲ್ಲಿ ಶ್ರೀ ಕೃಷ್ಣ ಬೋಧಿಸಿದ ತತ್ವ, ಸಂದೇಶ, ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಭಾವಸಾರ ಕ್ಷತ್ರಿಯ ಸಮಾಜ, ಶ್ರೀ ಮಾತಾ ಹಿಂಗುಲಾಂಬಿಕಾ ಮಹಿಳಾ ಮಂಡಳ, ಯುವಕ ಮಂಡಳ ಸೇರಿದಂತೆ ಸಮಾಜ ಬಾಂಧವರು ಪಾಲ್ಗೊಂಡಿದ್ದರು.

---

# ಉಚಿತ ಶೂ, ಸಾಕ್ಸ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರಕಾರಿ ಪ್ರೌಢಶಾಲೆಯಲ್ಲಿ ರಾಜ್ಯ ಸರ್ಕಾರದ ವತಿಯಿಂದ ಉಚಿತವಾಗಿ ಕೊಡಮಾಡುವ ಶೂ ಹಾಗೂ ಸಾಕ್ಸ್‌ಗಳನ್ನು ಪ್ರಸಕ್ತ ಸಾಲಿನ 8ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಮಕ್ಕಳಿಗೆ ವಿತರಿಸಲಾಯಿತು.

ಶಾಲಾ ಆವರಣದಲ್ಲಿ ಆಯೋಜಿಸಲಾಗಿದ್ದ ಈ ಸರಳ ಸಮಾರಂಭದಲ್ಲಿ ಪತ್ರಕರ್ತ, ಎಸ್‌ಡಿಎಂಸಿ ಸಮಿತಿಯ ಸದಸ್ಯ, ಶಿಕ್ಷಣ ತಜ್ಞ ಸಂಗಮೇಶ ಮೆಣಸಗಿ ಮಕ್ಕಳಿಗೆ ಶೂ ಹಾಗೂ ಸಾಕ್ಸ್‌ಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯ ಬಿ.ಆರ್. ಗದುಗಿನ, ಶಿಕ್ಷಕರಾದ ವಿ.ವಿ. ಅಣ್ಣಿಗೇರಿ, ನೆಹರು ಮನೋಳಿ, ಆರ್.ಡಿ. ಬಡಿಗೇರ, ಶಿಕ್ಷಕಿಯರಾದ ಡಿ.ಎಸ್. ಆಲಮೇಲ, ಗೌರಮ್ಮ, ಅತಿಥಿ ಶಿಕ್ಷಕಿ ದೀಪಾ ತುಕ್ಕೋಜಿ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

---

# ಜೀವಧ್ವನಿ ಸಂಸ್ಥೆಯಿಂದ ಮಾನವೀಯ ಕಾರ್ಯ




■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಜೀವಧ್ವನಿ ಸಂಸ್ಥೆಯ ನಿಖಿಲ್ ಹಂಜಗಿ ನೇತೃತ್ವದಲ್ಲಿ ಬೀದಿ ಪ್ರಾಣಿಗಳ ಬಗ್ಗೆ ವಿಶೇಷವಾಗಿ ಕಾಳಜಿ ವಹಿಸುತ್ತಿದ್ದು, ಹಸುಗಳು ಮತ್ತು ನಾಯಿಗಳಿಗೆ ಸುರಕ್ಷತೆಯನ್ನು ಒದಗಿಸಲು ಆದ್ಯತೆ ನೀಡುತ್ತಿದೆ. ರಾತ್ರಿ ವೇಳೆ ವಾಹನಗಳ ಜೊತೆ ಘರ್ಷಣೆಗೊಳಗಾಗುವ ಅಪಾಯ ಬೀದಿ ಪ್ರಾಣಿಗಳಿಗೆ ಹೆಚ್ಚಾಗಿರುತ್ತದೆ. ಈ ಸಮಸ್ಯೆಯನ್ನು ಪರಿಹರಿಸಲು, ಜೀವಧ್ವನಿ ಸಂಸ್ಥೆ ಹಸುಗಳು ಮತ್ತು ನಾಯಿಗಳ ಕುತ್ತಿಗೆಗೆ ಪ್ರತಿಫಲಕ ಬೆಲ್ಟ್‌ಗಳನ್ನು (Reflective Belts) ಅಳವಡಿಸುತ್ತಿದ್ದು, ಇದರಿಂದ, ವಾಹನ ಚಾಲಕರು ದೂರದಿಂದಲೇ ಈ ಪ್ರಾಣಿಗಳನ್ನು ಗಮನಿಸಲು ಸಾಧ್ಯವಾಗುತ್ತದೆ ಮತ್ತು ಅಪಘಾತಗಳ ಸಂಭವ ಕಡಿಮೆಗೊಳ್ಳುತ್ತದೆ. ಜೀವಧ್ವನಿ ಕಾರ್ಯಕರ್ತರಾದ ಮಧುಮತಿ ಹೆಮಕರ್, ವಿಶ್ವನಾಥ್ ಶಿವಶೆಟ್ಟರ್, ಪರೋಕ್ಷ ಹೂಲಿ, ರಾಘವೇಂದ್ರ, ಅವಿನಾಶ್ ಬೀದಿ ಪ್ರಾಣಿಗಳಿಗೆ ಆರೋಗ್ಯ, ಆಹಾರ, ಮತ್ತು ಆಶ್ರಯವನ್ನು ಒದಗಿಸುವ ಕೆಲಸವನ್ನು ಮಾಡುತ್ತಿದ್ದಾರೆ. ಇದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

---

# ಬಸವರಾಜ ಮಠದ ಮಹಾನ್ ಚೇತನ

■ವಿಜಯಸಾಕ್ಷಿ ಸುದ್ದಿ, ಗದಗ



ಸ್ವತಂತ್ರ ಭಾರತದಲ್ಲಿ ಜಾತೀಯತೆ, ಭ್ರಷ್ಟಾಚಾರ, ಅಸಮಾನತೆ ಇತ್ಯಾದಿಗಳಿಂದ ಭಾರತದ ಏಳ್ಗೆ ಕುಂಠಿತವಾಗಿದೆ. ಅವು ತೊಲಗಿ ಹೊಸ ದಿನ ಉದಯಿಸಬೇಕು ಎನ್ನುವ ಕನಸನ್ನು ಹೊತ್ತು, ಅದನ್ನು ಸಾಕಾರಗೊಳಿಸಲು ಅವಿರತವಾಗಿ ಶ್ರಮಿಸಿದ ಬಸವರಾಜ ಸಿ.ಮಠದ ಒಳ್ಳೆಯ ಅಭಿರುಚಿಯ ಹವ್ಯಾಸಗಳನ್ನು ಹೊಂದಿದ ವ್ಯಕ್ತಿತ್ವವುಳ್ಳವರು. ಸಮಾಜಕ್ಕಾಗಿ ದುಡಿದ ದೇಹವನ್ನು ಸಮಾಜಕ್ಕಾಗಿ ಅರ್ಪಿಸಿದ ಮಹಾನ್ ಚೇತನ. ಲಿಂಗೈಕ್ಯರಾದ ನಂತರ ಅವರ ದೇಹವನ್ನು ಆಯುರ್ವೇದ ಆಸ್ಪತ್ರೆಗೆ ದಾನ ಮಾಡಲಾಯಿತು.

ಲಿಂಗೈಕ್ಯರಾದ ಬಸವರಾಜ ಮಠದ ಅವರ ಭಾವಚಿತ್ರವನ್ನು ಅಕ್ಕನ ಬಳಗದ ಸದಸ್ಯೆ ಶಕುಂತಲಾ ಮಠದ ಅವರು ಅಕ್ಕನ ಬಳಗದಲ್ಲಿ ಅವರ ಕುಟುಂಬ ವರ್ಗದವರ ಜೊತೆ ಸೇರಿ ತಮ್ಮ ಮಕ್ಕಳಾದ ಶರಣಬಸವ, ಮಧುಮತಿ, ರೋಹಿಣಿ, ಮಹಾದೇವಿ ಹಾಗೂ ಸೊಸೆಯಾದ ದೀಕ್ಷಾ ಅವರ ಸಹಕಾರದೊಂದಿಗೆ ಅರ್ಥಪೂರ್ಣವಾದ ಕಾರ್ಯಕ್ರಮ ನಡೆಸಿಕೊಟ್ಟರು.

ಅಧ್ಯಕ್ಷರಾದ ಲಲಿತಾ ವಿ.ಬಾಳಿಹಳ್ಳಿಮಠ ಸರ್ವರನ್ನೂ ಸ್ವಾಗತಿಸಿದರು. ವೇದಿಕೆ ಮೇಲೆ ಶಶಿರೇಖಾ ಶಿಗ್ಲಿಮಠ, ಜಯಲಕ್ಷ್ಮೀ ಬಳ್ಳಾರಿ, ಶಕುಂತಲಾ ಮಠದ ಉಪಸ್ಥಿತರಿದ್ದರು. ಬಸವರಾಜ ಮಠದ ಅವರ ಬಗ್ಗೆ ಲತಾಮುತ್ತಿನಪೆಂಡಿಮಠ, ವೀರಯ್ಯ ಹಿರೇಮಠ, ಡಾ. ಶೇಖರ ಸಜ್ಜನರ, ಮಧು ಮುತ್ತಿನಪೆಂಡಿಮಠ ಮಾತನಾಡಿದರು. ಶಾರದಾ ಹಿರೇಮಠ ನಿರೂಪಿಸಿದರು. ರೇಣುಕಾ ಅಮಾತ್ಯ ವಂದಿಸಿದರು.

---

# ಪಿಎಚ್‌ಡಿ ಪ್ರದಾನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಮಂಜುನಾಥ ದೇವಪ್ಪ ಕಡ್ಡಿಪೂಜಾರ ಅವರು ಮಂಡಿಸಿದ ‘ಲೈಫ್ ಆಂಡ್ ವರ್ಕ್ಸ್ ಆಫ್ ಡಾ. ಅಜಯ ಕುಮಾರ ಸೂದ್: ಎ ಸೈಂಟೊಮೆಟ್ರಿಕ್ ಸ್ಟಡಿ’ ಮಹಾಪ್ರಬಂಧಕ್ಕೆ ಕರ್ನಾಟಕ ವಿಶ್ವವಿದ್ಯಾಲಯ ಪಿಎಚ್‌ಡಿ ಪ್ರದಾನ ಮಾಡಿದೆ. ಇವರಿಗೆ ಕವಿವಿಯ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗದ ನಿವೃತ್ತ ಪ್ರೊಫೆಸರ್ ಡಾ. ಬಿ.ಡಿ. ಕುಂಬಾರ ಮಾರ್ಗದರ್ಶನ ಮಾಡಿದ್ದಾರೆ.

## ಬೆಂಬಲ ಬೆಲೆ ಯೋಜನೆಯಡಿ ಹೆಸರು ಹುಟ್ಟುವಳಿ ಖರೀದಿ ಕೇಂದ್ರ ಆರಂಭ: ಡಿಸಿ ಮಾಹಿತಿ

# ಹೆಸರು ಕ್ವಿಂಟಲ್‌ಗೆ ರೂ. 8682 ನಿಗದಿ

■ವಿಜಯಸಾಕ್ಷಿ ಸುದ್ದಿ, ಗದಗ

2025–25ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತ–ರಿಂದ ಎಫ್‌ಎಕ್ಯೂ ಗುಣಮಟ್ಟದ ಹೆಸರು ಹುಟ್ಟುವಳಿಯನ್ನು ಖರೀದಿಸಲಾಗುತ್ತಿದ್ದು, ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ 2024–25ನೇ ಸಾಲಿನ ಕನಿಷ್ಠಬೆಂಬಲ ಬೆಲೆ ಯೋಜನೆಯಡಿಯಲ್ಲಿ ಹೆಸರು ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಂಬಲ ಬೆಲೆ ಯೋಜನೆಯ ಸದುಪಯೋಗವನ್ನು ರೈತರು ಪಡೆದುಕೊಳ್ಳಲು ಖರೀದಿ ಕೇಂದ್ರದ ಮುಂದೆ ಬ್ಯಾನರ್ ಅಳವಡಿಸಬೇಕು. ರೈತರಿಗೆ ಕರಪತ್ರಗಳನ್ನು ವಿತರಿಸುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಅವರು ಪಾಲ್ಗೊಂಡು ಇದರ ಲಾಭ ಪಡೆಯುವಂತೆ ಕ್ರಮ ವಹಿಸಬೇಕು ಎಂದರು.

ಸರ್ಕಾರದ ಮಾನದಂಡಗಳನ್ವಯ ಎಫ್‌ಎಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜೆನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಎಫ್‌ಎಕ್ಯೂ ಗುಣಮಟ್ಟದ ಪರಿಶೀಲನೆಗಾಗಿ ಆಯಾ ಹೋಬಳಿ ವ್ಯಾಪ್ತಿಯ ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಸಿಬ್ಬಂದಿಗಳನ್ನು ಗ್ರೇಡರ್ ಆಗಿ ನೇಮಕ ಮಾಡಬೇಕು. ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಖರೀದಿಸಿದ ಹೆಸರು ಹುಟ್ಟುವಳಿಯನ್ನು ದಾಸ್ತಾನು ಮಾಡಲು ಜಿಲ್ಲೆಯಲ್ಲಿರುವ ರಾಜ್ಯ ಹಾಗೂ ಕೇಂದ್ರ ಉಗ್ರಾಣಗಳಲ್ಲಿ ಸ್ಥಳ ಕಾಯ್ದಿರಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ.



ಸರ್ಕಾರದ ಆದೇಶದನ್ವಯ ಜಿಲ್ಲೆಯ ಪ್ರತಿ ರೈತರಿಂದ ಎಕರೆಗೆ 2 ಕ್ವಿಂಟಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತ–ರಿಂದ 10 ಕ್ವಿಂಟಲ್ ಮಾತ್ರ ಖರೀದಿಸಲು ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ಇವರಿಗೆ ಸೂಚಿಸಲಾಗಿದ್ದು, ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗ ಆಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.



ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ, ಎಫ್‌ಎಕ್ಯೂ ಗುಣಮಟ್ಟದ ಹೆಸರು ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ ರೂ.8682ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಆದೇಶ ದಿನಾಂಕ 24–8–2024ರ ಅನುಸಾರ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶದ ದಿನಾಂಕದಿಂದ ರೈತರ ನೋಂದಣಿ 45 ದಿನದವರೆಗೆ ಹಾಗೂ ನೋಂದಣಿ ಕಾರ್ಯದ ಜೊತೆಯಲ್ಲಿಯೇ ಖರೀದಿ ಕಾಲಾವಧಿಯನ್ನು 90 ದಿನಗಳವರೆಗೆ ಜರುಗಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಇಲಾಖೆ ಅಧಿಕಾರಿಗಳು, ಕೃಷಿ ಮಾರಾಟ ಇಲಾಖೆ, ಮಾರ್ಕೆಟಿಂಗ್ ಫೆಡರೇಷನ್ ಶಾಖಾ ವ್ಯವಸ್ಥಾಪಕರು, ಎಪಿಎಂಸಿ ಕಾರ್ಯದರ್ಶಿ, ಕೇಂದ್ರ ಹಾಗೂ ರಾಜ್ಯ ಉಗ್ರಾಣ ನಿಗಮದ ಶಾಖಾ ವ್ಯವಸ್ಥಾಪಕರು ಹಾಜರಿದ್ದರು.

ರಾಜ್ಯದಲ್ಲಿ ಮಾರ್ಕ್‌ಫೆಡ್ ಸಂಸ್ಥೆಯನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯನ್ನಾಗಿ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ ಬೆಂಗಳೂರು ಮತ್ತು ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಯಮಿತ ಕಲಬುರಗಿ ಸಂಸ್ಥೆಗಳನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ಗುರುತಿಸಲಾಗಿದೆ. ಜಿಲ್ಲೆಯ 56 ಕಡೆ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು.

## ಅಂಬಿಗರ ಚೌಡಯ್ಯ ಸತ್ಯ ನಿಷ್ಠ ಶರಣ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮಾಜದಲ್ಲಿನ ಡಾಂಭಿಕ ಜೀವನ, ಮೂಢನಂಬಿಕೆ ಹಾಗೂ ಕಂದಾಚಾರಗಳನ್ನು ನೇರವಾಗಿ ವಚನಗಳ ಮೂಲಕ ಖಂಡಿಸಿ ಸತ್ಯದರ್ಶನ ಮಾಡಿಸಿದ ಅಂಬಿಗರ ಚೌಡಯ್ಯ ನಿಷ್ಠುರವಾದಿ ಶರಣರಾಗಿದ್ದರು ಎಂದು ವರ್ಷಾ ಬಾರಕೇರ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಜರುಗಿದ ಶ್ರಾವಣ ಮಾಸದ ಪುರಾಣ ಪ್ರವಚನದಲ್ಲಿ ಉಪನ್ಯಾಸ ನೀಡಿ, 12ನೇ ಶತಮಾನವು ಶಿವ ಶರಣರ ಶತಮಾನವಾಗಿತ್ತು. ಶೋಷಿತ ಜನರ ದುಃಖ–ದುಮ್ಮಾನುಗಳ ದನಿಯಾಗಿತ್ತು. ವ್ಯವಸ್ಥೆಯನ್ನು ನೇರವಾಗಿ ಖಂಡಿಸುವುದೇ ಕಷ್ಟವಾಗಿದ್ದ ಅಂತಹ ಸಮಯದಲ್ಲಿ ಅಂಬಿಗರ ಚೌಡಯ್ಯ ಸೈದ್ಧಾಂತಿಕ ನಿಲುವಿನೊಂದಿಗೆ ನಿಷ್ಠುರವಾಗಿ ವಚನಗಳ ಮೂಲಕ ಸತ್ಯ, ನಿಷ್ಠೆಗಳನ್ನು ತಮ್ಮ ಬದುಕಿನುದ್ದಕ್ಕೂ ಅಳವಡಿಸಿಕೊಂಡು ಬಂದಿದ್ದು ಇಂದಿನ ಆಧುನಿಕ ಕಾಲದಲ್ಲೂ ಅವರ ವಚನ ಸಾಹಿತ್ಯ ನಮಗೆಲ್ಲ ದಾರಿದೀಪವಾಗಿವೆ ಎಂದರು.

ವೇದಮೂರ್ತಿ ಪಂಚಾಕ್ಷರಯ್ಯ ಮರಿದೇವರಮಠ ಪುರಾಣ ಪ್ರವಚನ ನೀಡಿದರು. ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ, ರಾಮಣ್ಣಾ ಕಮಾಜಿ, ಮುರುಗೇಶ ನಪೂರಿಮಠ, ಶಿವಪ್ಪ ಮಡ್ಡಿ, ಮಾಹಾಂತೇಶ ಬಳ್ಳಾರಿ, ವಿಜಯಲಕ್ಷ್ಮಿ ಹಿರೇಮಠ ಇದ್ದರು.

## ವೈಭವದ ವೀರಭದ್ರೇಶ್ವರ ಪಾಲಕಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಬಣಗಾರ ಓಣಿಯ ಜಡೇಶಂಕರಲಿಂಗೇಶ್ವರ ಟ್ರಸ್ಟ್ ಕಮಿಟಿ ಹಾಗೂ ವೀರಶೈವ ಬಣಗಾರ ಸಮಾಜದಿಂದ ವೀರಭದ್ರೇಶ್ವರ ಪಾಲಕಿ ಉತ್ಸವ, ಅಗ್ನಿಪ್ರವೇಶ ಸಮಾರಂಭ ಮಂಗಳವಾರ ವೈಭವದಿಂದ ನಡೆಯಿತು.

ಶ್ರಾವಣ ಮಾಸದ ಹಿನ್ನೆಲೆಯಲ್ಲಿ ಮಂಗಳವಾರ ಬೆಳಿಗ್ಗೆ ಬಡಾವಣೆಯಲ್ಲಿನ ಜಡೇಶಂಕರಲಿಂಗ, ವೀರಭದ್ರೇಶ್ವರ ಹಾಗೂ ಕಾಳಿಕಾದೇವಿಗೆ ಮಹಾರುದ್ರಾಭಿಷೇಕ ಮತ್ತು ಎಲೆ ಪೂಜೆಯೊಂದಿಗೆ ಅಗ್ನಿಪ್ರವೇಶ ಕಾರ್ಯಕ್ರಮ ನಡೆಯಿತು. ಬಳಿಕ ಮುಂಡರಗಿ ತಾಲೂಕಿನ ಸೋಗಿ ಗ್ರಾಮದ ವೀರಭದ್ರೇಶ್ವರ ಪುರವಂತರ ತಂಡದಿಂದ ವಾದ್ಯ, ವೀರಗಾಸೆ ನೃತ್ಯ ಸೇರಿ ಶ್ಯಾಂಬಾಳು, ಕರಡಿಮಜಲು ಮತ್ತು ವಿವಿಧ ವಾದ್ಯ ಮೇಳಗಳೊಂದಿಗೆ ಮುತ್ತೈದೆಯರು ಹಾಗೂ ಸಕಲ ಸದ್ಭಕ್ತರೊಡಗೂಡಿ ವೀರಭದ್ರಶ್ವರ ಪಾಲಕಿ ಉತ್ಸವವು ಪಟ್ಟಣದ ಬಸವೇಶ್ವರ ವೃತ್ತ, ಮೈಸೂರು ಮಠ, ದುರ್ಗಾ ವೃತ್ತ ಕೊಳ್ಳಿಯವರ ಕತ್ರಿ ಸೇರಿ ಪ್ರಮುಖ ರಸ್ತೆ ಹಾಗೂ ವೃತ್ತ ಮಾರ್ಗವಾಗಿ ಮರಳಿ ದೇವಸ್ಥಾನ ತಲುಪಿತು. ನಂತರ ಆಯೋಜಿಸಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ದೇವಸ್ಥಾನದಲ್ಲಿ ಉಡಿ ಸೇವೆ, ಅನ್ನ ಸಂತರ್ಪಣೆ ನಡೆಯಿತು.



ಈ ವೇಳೆ ಬಣಗಾರ ಸಮಾಜದ ಮುಖಂಡರಾದ ಶೇಖರಪ್ಪ ಚನ್ನಿ, ಈಶಪ್ಪ ಇಟಗಿ, ಶೇಖಣ್ಣ ಇಟಗಿ, ಗಂಗಪ್ಪ ಕೊಡಕಲ್, ಶ್ರೀಮಂತ ಬಾರಿಮನಿ, ಈರಪ್ಪ ಬಾವಿಕಟ್ಟಿ, ಚನ್ನಪ್ಪ ಚನ್ನಿ, ಶಿವು ಖಾತರಕಿ, ಕಳಕೇಶ ಚನ್ನಿ, ಬಸವರಾಜ ಚನ್ನಿ, ವಿಶಾಲ ಇಟಗಿ, ಮಂಜುನಾಥ ಚನ್ನಿ, ಬಸವರಾಜ ಗುಡ್ಡದ, ವಿರೇಶ ಕೊಡಕಲ್, ನಾಗರಾಜ ಗುಡ್ಡದ, ಶ್ರೀಕಾಂತ ಬಾವಿಕಟ್ಟಿ, ಸಂಗಮ್ಮ ಬಾವಿಕಟ್ಟಿ, ಪ್ರೇಮಕ್ಕ ಚನ್ನಿ, ಗಿರೀಜಾ ಇಟಗಿ, ಲಕ್ಷ್ಮೀ ಬಾರಿಮನಿ, ಸುಲೋಚನಾ ಕೊಡೆಕಲ್ ಸೇರಿ ಇತರರು ಇದ್ದರು.

## ಇಂದಿರಾ ಕ್ಯಾಂಟೀನ್ ಬಡವರಿಗೆ ಆಧಾರ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ಬಡವರು, ಕೂಲಿ ಕಾರ್ಮಿಕರಿಗೆ ಇಂದಿರಾ ಕ್ಯಾಂಟೀನ್ ಆಧಾರವಾಗಿದ್ದು, ಕಡಿಮೆ ದರದಲ್ಲಿ ಗುಣಮಟ್ಟದ ಊಟ, ಉಪಹಾರ ನೀಡುವ ಯೋಜನೆ ಬಹುಜನರಿಗೆ ಉಪಯುಕ್ತವಾಗಿದೆ ಎಂದು ಪುರಸಭೆ ಸದಸ್ಯ ರಾಜಣ್ಣ ಕುಂಬಿ ಹೇಳಿದರು.

ಅವರು ಪಟ್ಟಣದ ಶಿಗ್ಲಿ ಕ್ರಾಸ್ ಬಳಿ ಮಂಗಳವಾರ ನೂತನ ಇಂದಿರಾ ಕ್ಯಾಂಟೀನ್ ನಿರ್ಮಾಣದ ಭೂಮಿಪೂಜೆಯಲ್ಲಿ ಭಾಗವಹಿಸಿ ಮಾತನಾಡಿದರು.ಬಡ ಜನತೆಯು ಹಸಿವಿನಿಂದ ಮಲಗಬಾರದು ಎಂಬುದು ಸಿದ್ದರಾಮಯ್ಯನವರ ಆಶಯವಾಗಿದೆ. ಹಸಿವು ಮುಕ್ತ ಸಮಾಜ ನಿರ್ಮಿಸುವ ಅವರ ಕನಸನ್ನು ಈಡೇರಿಸುವ ನಿಟ್ಟಿನಲ್ಲಿ ಇಂದಿರಾ ಕ್ಯಾಂಟೀನ್ ಮುನ್ನುಡಿ ಬರೆದಿದೆ. ಆದ್ದರಿಂದ ಬಡ ಜನರ ಹಸಿವು ನೀಗಿಸುವ ನಿಟ್ಟಿನಲ್ಲಿ ಇಂದಿರಾ ಕ್ಯಾಂಟೀನ ಆರಂಭಿಸಲಾಗುತ್ತಿದೆ. ರೂ. 5ಗಳಲ್ಲಿ ಬೆಳಗಿನ ಉಪಹಾರ ಹಾಗೂ ಮಧ್ಯಾಹ್ನ ರೂ.10ಕ್ಕೆ ಊಟ ನೀಡುವ ಮಹತ್ವಾಕಾಂಕ್ಷಿ ಯೋಜನೆ ಕಾಂಗ್ರೆಸ್ ಪಕ್ಷದ ಕೊಡುಗೆಯಾಗಿದೆ. ಪಟ್ಟಣದ ಹಾಗೂ ತಾಲೂಕಿನ ಕೂಲಿ ಕಾರ್ಮಿಕರು ಹಾಗೂ ಬಡ ಜನತೆಯು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಹೇಳಿದರು.ಸಾಹೀಬ್ ಜಾನ್ ಹವಾಲ್ದಾರ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕನಸಿನ ಯೋಜನೆ ಇದಾಗಿದೆ. ಈಗಾಗಲೇ ರಾಜ್ಯದ ಹಲವು ಪ್ರಮುಖ ಪಟ್ಟಣದ ಮತ್ತು ನಗರ ಪ್ರದೇಶಗಳಲ್ಲಿ ಈ ಯೋಜನೆ ಯಶಸ್ವಿಯಾಗಿದೆ. ಬಡ ಜನತೆಯು ಹಸಿವಿನಿಂದ ಬಳಬಾರದು ಎನ್ನುವುದು ಸರಕಾರದ ಧ್ಯೇಯವಾಗಿದೆ ಎಂದು ಹೇಳಿದರು.ಈ ವೇಳೆ ಪುರಸಭೆಯ ನೂತನ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಅವರು ಕಾಮಗಾರಿಗೆ ಚಾಲನೆ ನೀಡಿದರು. ಉಪಾಧ್ಯಕ್ಷ ಫಿರ್ದೋಶ್ ಆಡೂರ, ಬಸವರಾಜ ಓದುನವರ, ಮಂಜವ್ವ ನಂದೆಣ್ಣವರ, ಮುಸ್ತಾಕ್ ಅಹ್ಮದ್ ಶಿರಹಟ್ಟಿ, ಫಕ್ಕೀರೇಶ ನಂದೆಣ್ಣವರ, ನೀಲಪ್ಪ ಶೆರಸೂರಿ, ಸಿದ್ದು ದುರಗಣ್ಣವರ, ಸದಾನಂದ ನಂದೆಣ್ಣವರ, ಇಸ್ಮಾಯಿಲ್ ಆಡೂರ ಸೇರಿದಂತೆ ಅನೇಕರು ಇದ್ದರು.

## ಚಿತ್ರಕಲೆಯಲ್ಲಿ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ಗದಗ ಇವರ ಸಹಯೋಗದಲ್ಲಿ 'ಚಿಣ್ಣರ ಚಿತ್ರ ಚಿತ್ತಾರ' ರಾಜ್ಯಮಟ್ಟದ ಮಕ್ಕಳ ಚಿತ್ರಕಲೋತ್ಸವ–2024–25ನೇ ಸಾಲಿನ ಚಿತ್ರಕಲಾ ಸ್ಪರ್ಧೆಯಲ್ಲಿ ಗದಗ–ಬೆಟಗೇರಿ ಎಸ್‌ಎಸ್‌ಕೆ ಜಗದಂಬಾ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿನಿ ಸಮೃದ್ಧಿ ಅರಸಿದ್ದಿ ವಿಶೇಷ ಪ್ರಶಸ್ತಿಗೆ ಆಯ್ಕೆಯಾಗಿ ಶಿಕ್ಷಣ ಸಂಸ್ಥೆಗೆ ಕೀರ್ತಿ ತಂದಿದ್ದಾಳೆ.

ಚಿತ್ರಕಲೆ ತರಬೇತಿ ಡಾ. ಜಾಕೀರಹುಸೇನ್ ಎಮ್.ಕೊರ್ಲಹಳ್ಳಿ ಇವರಿಗೆ ಮತ್ತು ಸಾಧಕ ವಿದ್ಯಾರ್ಥಿನಿಗೆ ಎಸ್‌ಎಸ್‌ಕೆ ಜಗದಂಬಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಲೋಕನಾಥ್ ಬಿ.ಕಬಾಡಿ, ಚೇರಮನ್ ಜಿ.ವಿ. ಬಸವಾ, ವಾಯ್ಸ್ ಚೇರಮನ್ ದತ್ತು ಯು.ಪವಾರ, ಸದಸ್ಯರಾದ ಸತ್ಯನಾರಾಯಣಸಾ ಕಬಾಡಿ, ಶಂಕರಸಾ ಮೇರವಾಡೆ, ಪ್ರಕಾಶ ಮಿಸ್ಕಿನ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಡಿ. ಬೆನಕಲ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಸಿ.ಎಸ್. ಹವಳದ, ಶಾಲೆಯ ಸಿಬ್ಬಂದಿ ವರ್ಗ, ಸಹ ಶಿಕ್ಷಕರು ಅಭಿನಂದಿಸಿದ್ದಾರೆ.

## ಉತ್ತಮ ವಿಚಾರಗಳಿಂದ ನೆಮ್ಮದಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮನದಲ್ಲಿನ ಕಲುಷಿತ ಅಂಧಕಾರವನ್ನು ದೂರವಾಗಿಸಿ ಬದುಕನ್ನು ಸನ್ಮಾರ್ಗದತ್ತ ಸಾಗಿಸಲು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಅವಶ್ಯಕ ಎಂದು ಡಾ.ಅಬ್ದುಲ್ ಕಲಾಂ ಟ್ರಸ್ಟ್‌ನ ಅಧ್ಯಕ್ಷ ರಫೀಕ್ ತೋರಗಲ್ ಹೇಳಿದರು.

ಪಟ್ಟಣದ ನವನಗರ ಬಡಾವಣೆಯಲ್ಲಿ ಶ್ರಾವಣ ಮಾಸದ ನಿಮಿತ್ತ ಮಂಗಳವಾರ ನಡೆದ ನಾಗರಕಟ್ಟಿಯ 11ನೇ ವರ್ಷದ ಅನ್ನಸಂತರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.



ಭಯಮುಕ್ತ ಬದುಕಿಗೆ ದಾನ, ಧರ್ಮ ಎಂಬುದು ರಹದಾರಿಯಾಗಿದ್ದು, ಒಳ್ಳೆಯ ಆಚಾರ, ವಿಚಾರಗಳು ಮನುಷ್ಯನ ಬದುಕಿನಲ್ಲಿ ನೆಮ್ಮದಿಯ ಸೆಲೆಯಾಗಿವೆ. ಹೀಗಾಗಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ನ್ಯಾಯ, ನೀತಿ, ಧರ್ಮ ಹಾಗೂ ಸಂಸ್ಕೃತಿ ಮತ್ತು ಪರಂಪರೆಯ ಬಗ್ಗೆ ವಿವರಣೆ ಜತೆಗೆ ಸಹಬಾಳ್ವೆಯ ಬದುಕು ನಡೆಸುವ ವಿಚಾರ ಧಾರೆಗಳು ತಿಳಿಯುತ್ತವೆ. ಒತ್ತಡ ಬದುಕಿನಿಂದ ಆಧ್ಯಾತ್ಮದ ಬದುಕಿನತ್ತ ವಾಲಲು ಧಾರ್ಮಿಕ ಕಾರ್ಯಕ್ರಮಗಳು ಸಹಾಯಕವಾಗಿವೆ. ಈ ದಿಸೆಯಲ್ಲಿ ಬಡಾವಣೆಯಸ ನಿವಾಸಿಗಳು ನಾಗರಕಟ್ಟಿಯ ಅನ್ನಪ್ರಸಾದ ಕಾರ್ಯಕ್ರಮದಲ್ಲಿ ಭಾಗವಹಿತ್ತಿರುವುದು ಅನುಕರಣೀಯ ಎಂದರು. ಮುಖಂಡರಾದ ಪ್ರಭುಲಿಂಗಗೌಡ ಶಿನ್ನೂರ, ಕಳಕಪ್ಪ ಪೋತಾ ಮಾತನಾಡಿ, ಪಟ್ಟಣದ ನವನಗರ ಬಡಾವಣೆಯಲ್ಲಿ ಕಳೆದ 10 ವರ್ಷಗಳಿಂದ ಶ್ರಾವಣ ಮಾಸದಲ್ಲಿ ನಡೆಯುತ್ತಿರುವ ಅನ್ನಸಂತರ್ಪಣೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಬಡಾವಣೆಯ ಎಲ್ಲ ಸಮುದಾಯದವರು ಭಾಗವಹಿಸುವ ಮೂಲಕ ಸೌಹಾರ್ದತೆಗೆ ಸಾಕ್ಷಿಯಾಗಿದ್ದಾರೆ. ಇಂತಹ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಯುವ ಮೂಲಕ ಎಲ್ಲರೂ ಒಂದು ಎಂಬ ಸಂದೇಶ ಗಟ್ಟಿಯಾಗುವುದರ ಜತೆಗೆ ಸಹಬಾಳ್ವೆ ನಡೆಸಲು ಸಹಕಾರಿ ಎಂದರು.

ಮುಖಂಡರಾದ ಮಲ್ಲೇಶ ಜೂಚನಿ, ಶಂಕರಗೌಡ ಶಿನ್ನೂರ, ಶರಣಪ್ಪ ಚಳಗೇರಿ, ಬಬ್ಲು ಮನಿಯಾರ, ಬಸವರಾಜ ಶಿನ್ನೂರ, ಎಫ್.ಎಸ್. ಕರಿದುರಗನವರ, ಮಹ್ಮದಗೌಸ್ ಅಕ್ಕಿ, ಅಬ್ದುಲ ಗಣಿ, ಚೇಕಪ್ಪ ಚೋಳಿನ, ಅಂಬಾಸ ರಂಗ್ರೇಜ ಮುಂತಾದವರಿದ್ದರು.

## ಅಮೇರಿಕಾದಲ್ಲಿ ಕನ್ನಡಿಗರನ್ನು ಉದ್ದೇಶಿಸಿ ಮಾತನಾಡಲಿರುವ ಬಸವರಾಜ ಹೊರಟ್ಟಿ


# ಆ.30ರಿಂದ 'ಅಕ್ಕ' ವಿಶ್ವ ಕನ್ನಡ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಆಗಸ್ಟ್ 30ರಿಂದ ಸೆಪ್ಟಂಬರ್ 1ರವರೆಗೆ ಅಮೇರಿಕಾದ ವರ್ಜೀನಿಯಾದ ರಿಚ್ಮಂಡ್‌ನಲ್ಲಿ 12ನೇ ಅಕ್ಕ ವಿಶ್ವ ಕನ್ನಡ ಸಮ್ಮೇಳನ ಜರುಗಲಿದ್ದು, ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿಯವರು ಪಾಲ್ಗೊಳ್ಳಲಿದ್ದಾರೆ.

ಗ್ರೇಟರ್ ರಿಚ್ಮಂಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಸಮ್ಮೇಳನ ನಡೆಯಲಿದ್ದು, ಸಭಾಪತಿ ಬಸವರಾಜ ಹೊರಟ್ಟಿಯವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅಮೇರಿಕಾ ಸೇರಿದಂತೆ ಸುತ್ತಲಿನ ದೇಶಗಳಲ್ಲಿ ವಾಸಿಸುವ ಕನ್ನಡಿಗರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಕನ್ನಡ ನಾಡು, ನುಡಿ, ಭಾಷಾ ಬೆಳವಣಿಗೆ, ಕನ್ನಡದ ಅಸ್ಮಿತೆ, ಕನ್ನಡ ಭಾಷೆಯ ಪ್ರಚಾರಕ್ಕೆ ಕೈಗೊಳ್ಳಬೇಕಾದ ಇಂದಿನ ತುರ್ತು ಅವಶ್ಯಕತೆಗಳು ಸೇರಿದಂತೆ ಹಲವಾರು ಮಹತ್ವದ ವಿಷಯಗಳ ಕುರಿತು ಹೊರಟ್ಟಿರವರು ತಮ್ಮ ನಾಲ್ಕು ದಶಗಳಿಗಿಂತಲೂ ಹೆಚ್ಚು ಕಾಲದ ಅನುಭವ, ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ.



ಕರ್ನಾಟಕದ ಹೊರಗಡೆಯಿಂದ ನಡೆಯುತ್ತಿರುವ ಅತಿದೊಡ್ಡ ಕನ್ನಡದ ಉತ್ಸವ ಎಂದೇ ಪರಿಗಣಿಸಲಾಗುವ ಅಕ್ಕ ವಿಶ್ವ ಕನ್ನಡ ಸಮ್ಮೇಳನ ಈ ಬಾರಿ ವರ್ಜೀನಿಯಾ ರಾಜ್ಯದ ರಾಜಧಾನಿಯಾಗಿರುವ ರಿಚ್ಮಂಡ್ ನಗರದಲ್ಲಿ ನಡೆಯಲಿದ್ದು, ಸುಮಾರು 5 ಸಾವಿರಕ್ಕೂ ಹೆಚ್ಚು ಕನ್ನಡಿಗರು ಒಂದೆಡೆ ಸೇರುತ್ತಿರುವುದು ವಿಶೇಷವಾಗಿದೆ.

ಸಮ್ಮೇಳನದಲ್ಲಿ ಕನ್ನಡ ನಾಡು, ನುಡಿ, ರಕ್ಷಣೆ ಕುರಿತು ವಿವಿಧ ಗೋಷ್ಠಿಗಳು, ಚಿಂತನ–ಮಂಥನ, ಸಂವಾದಗಳು ಜರುಗಲಿದ್ದು, ಅತ್ಯುತ್ತಮ ಮನರಂಜನಾ ಕಾರ್ಯಕ್ರಮಗಳನ್ನೂ ಆಯೋಜಿಸಲಾಗಿದೆ. ಕರ್ನಾಟಕದ ವಿವಿಧ ಬಗೆಯ ರುಚಿಕರ ತಿಂಡಿ–ತಿನಿಸುಗಳು, ವಿವಿಧ ವಾಣಿಜ್ಯ ಮತ್ತು ವ್ಯಾಪಾರ ಮೇಳ ಹಾಗೂ ಮಳಿಗೆಗಳು, ಕಲೆ ಮತ್ತು ಸಾಹಿತ್ಯಿಕ ವೇದಿಕೆಗಳು, ಮಹಿಳಾ ವೇದಿಕೆ, ಯುವ ವೇದಿಕೆ, ವಿದ್ಯಾ ಸಂಸ್ಥೆಗಳ ಹಳೇ ವಿದ್ಯಾರ್ಥಿಗಳ ಮಹಾಸಂಗಮ, ವಿವಿಧ ಕ್ರೀಡಾಕೂಟಗಳು, ಆರೋಗ್ಯ ಮತ್ತು ಅಧ್ಯಾತ್ಮಿಕ ವೇದಿಕೆಗಳು ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳು ಈ ಬಾರಿಯ ಅಕ್ಕ ಸಮ್ಮೇಳನದ ವಿಶೇಷ ಆಕರ್ಷಣೆಗಳಾಗಿವೆ.

ಅಕ್ಕ ಸಮ್ಮೇಳನದಲ್ಲಿ ಪಾಲ್ಗೊಳ್ಳಲು ಬುಧವಾರ ರಾತ್ರಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಅಮೇರಿಕಾದ ವರ್ಜೀನಿಯಾ ರಾಜ್ಯದ ರಿಚ್ಮಂಡ್ ನಗರಕ್ಕೆ ಪ್ರಯಾಣ ಬೆಳೆಸಲಿದ್ದಾರೆ.


ಕರ್ನಾಟಕ ಸರಕಾರ

ಜಿಲ್ಲಾ ಪಂಚಾಯತ, ಗದಗ.

ಕಾರ್ಯನಿರ್ವಾಹಕ ಇಂಜಿನೀಯರ, ಪಂ.ರಾಜ್.ಇಂ. ವಿಭಾಗ, ಗದಗ.

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2024–25/ ದಿನಾಂಕ:27–08–2024

ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ

Standard Bid Document KW-1&2 (ಏಕಲಕೋಟಿ ಪದ್ದತಿ)

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್–2000 ನಿಯಮದಂತೆ Standard Bid Document KW–1&2ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಮುಖಾಂತರ 32 ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024–25ನೇ ಸಾಲಿನ 2210–00–101–0–36 ಆಯುಷ್ ಇಲಾಖೆ ಕಟ್ಟಡಗಳ ನಿರ್ವಾಹಣೆ ಯೋಜನೆ/2023–24ನೇ ಸಾಲಿನ ವಿಶೇಷ ಆಕಾಂಕ್ಷಿ ಯೋಜನೆ/2024–25ನೇ ಸಾಲಿನ 2403–00–101–0–28 ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಕಟ್ಟಡಗಳ ಯೋಜನೆ/2023–24ನೇ ಸಾಲಿನ ಪದವಿ ಪೂರ್ವ ಇಲಾಖೆ ಕಟ್ಟಡಗಳ ಯೋಜನೆ/2024–25ನೇ ಸಾಲಿನ 2225–00–103–0–40 ಹಿಂದೂಳಿದ ವರ್ಗಗಳ ಇಲಾಖೆ ಯೋಜನೆ/2021–22 ಸಾಲಿನ 5054 ಮಳೆಹಾನಿ ಯೋಜನೆ/2024–25ನೇ ಸಾಲಿನ 2435–00–101–0–32 ತೋಟಗಾರಿಕೆ ಕಟ್ಟಡಗಳ ಯೋಜನೆ/2024–25ನೇ ಸಾಲಿನ 2405–00–101–0–27 ಮೀನುಗಾರಿಕೆ ಇಲಾಖೆ ಕಟ್ಟಡಗಳ ಯೋಜನೆ /2024–25ನೇ ಸಾಲಿನ 2406–00–101–0–28 ಸಾಮಾಜಿಕ ಅರಣ್ಯ ಇಲಾಖೆ ಮೂಲಭೂತ ಸೌಕರ್ಯ ಯೋಜನೆ /2024–25ನೇ ಸಾಲಿನ 2210–00–101–0–36 ಆರೋಗ್ಯ ಇಲಾಖೆ ಕಟ್ಟಡಗಳ ನಿರ್ವಾಹಣೆ ಯೋಜನೆಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್,(https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

Indent Nos: RDPR/2023-24/WORK_INDENT : **7547, 7542, 6520, 7407, 7463, 7462, 7461, 7460, 7416, 7415, 7346, 6964, 8133, 8134, 8130, 8129, 8211, 8197, 7980, 8113, 7974, 8112, 8114, 8106, 8030, 8028, 7651, 7650, 7648, 7647, 7646,7643**

**ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. 2.51 ಲಕ್ಷ ಮತ್ತು ಗರಿಷ್ಠ ಮೊತ್ತ ರೂ. 22.26 ಲಕ್ಷಗಳು**

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ:** ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ. ಇ–ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್–ಬಿ ಯನ್ನು ವೆಬಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ: **27–08–2024 ರಿಂದ 12–09–2024 ರಂದು 16.00 ಗಂಟೆಯವರೆಗೆ. ಆರ್ಥಿಕ ಬಿಡ್ ತೆರೆಯುವ ದಿನಾಂಕ: 18–09–2024 ರಂದು 16.30** ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ–ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/– ಕಾರ್ಯನಿರ್ವಾಹಕ ಇಂಜಿನೀಯರರು,
ಪಂ.ರಾಜ್.ಇಂಜಿನೀಯರಿಂಗ್ ವಿಭಾಗ, ಗದಗ.

ವಾ.ಸಾ.ಇ/ಗದಗ/179/ದೇಶಪಾಂಡೆಪಬ್ಲಿಸಿಟಿ/2024–25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka